# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 236
Volume - 01 Issue - 236
ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269
Title- Code: KARKAN 28269
ಚಿತ್ರದುರ್ಗ
Chitradurga
ದಿನಾಂಕ: 06–04–2024 ಶನಿವಾರ
Date: 06-04-2024 Saturda
ಪುಟ: 4
Page: 4
ಬೆಲೆ : ರೂ.2–00
Price: Rs. 2-00



ಒಳಪುಟದ ಸುದ್ದಿಗಳು

ಬಾಲ್ಯ ವಿವಾಹದ ಬಗ್ಗೆ ಜಾಗೃತಿ ಮೂಡಿಸಿ: ನ್ಯಾ.ರಾಜೇಶ್ವರಿ 2

ಬೆಳೆವಿಮೆ ಪಾವತಿಯಲ್ಲಿ ರೈತರಿಗೆ ಅನ್ಯಾಯ: ರೈತ ಸಂಘ ಆರೋಪ 3

ಇಲ್ಲಿ ದೇವರು ವರ ಕೊಟ್ಟರೂ ಪೂಜಾರಿ... 4



ಸುದ್ದಿ, ಜಾಹಿರಾತಿಗೆ 9686622252


**ಶುಭ ನುಡಿ**

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

## ಫಾಸ್ಟ್ ನ್ಯೂಸ್

### ಅನಧಿಕೃತ ಖಾಸಗಿ ಶಾಲೆಗಳಿಗೆ ಮಕ್ಕಳನ್ನು ದಾಖಲಿಸದಿರಲು ಎಚ್ಚರಿಕೆ

**ಚಿತ್ರದುರ್ಗ:**ಚಿತ್ರದುರ್ಗ ನಗರದ ಕೆ.ಬಿ.ಬಡಾವಣೆಯ ಕಿಂಟೋ ಕಾನ್ವೆಂಟ್ ಕಿರಿಯ ಪ್ರಾಥಮಿಕ ಶಾಲೆ, ಕೋಟೆ ರಸ್ತೆಯ ಮಿನರ್ವ ಕಾನ್ವೆಂಟ್ ಪ್ರಾಥಮಿಕ ಶಾಲೆ, ಜೈನ್ ಕಾಲೋನಿಯ ಮಾಡಲ್ ಸೈನಿಕ್ ಕಿರಿಯ ಪ್ರಾಥಮಿಕ ಶಾಲೆ ಹಾಗೂ ಮಾಳಪ್ಪನಹಟ್ಟಿಯ ಗುಡ್ ಷಫರ್ಡ್ ಶಾಲೆಗಳು ಮಾನ್ಯತೆ ಪಡೆಯದೇ ಅನಧಿಕೃತವಾಗಿ ಶಾಲೆ ಸ್ಥಳಾಂತರಿಸಿ ನಡೆಸುತ್ತಿವೆ. ಈ ಶಾಲೆಗಳಿಗೆ ಪ್ರಸಕ್ತ 2024–25 ನೇ ಸಾಲಿನ ಶೈಕ್ಷಣಿಕ ವರ್ಷಕ್ಕೆ ಹಾಗೂ ಮುಂದಿನ ಶೈಕ್ಷಣಿಕ ಸಾಲಿಗೆ ಪೋಷಕರು ತಮ್ಮ ಮಕ್ಕಳನ್ನು ದಾಖಲಿಸಬಾರದು. ಯಾವುದೇ ಖಾಸಗಿ ಶಾಲೆಗೆ ಮಕ್ಕಳನ್ನು ದಾಖಲಿಸುವ ಮುನ್ನ ಶಾಲೆ ಮಾನ್ಯತೆ, ನವೀಕರಣ ಹಾಗೂ ಮಂಜೂರಾತಿ ಪಡೆದ ಸ್ಥಳದಲ್ಲಿಯೇ ನಡೆಸುತ್ತಿರುವುದನ್ನು ಖಚಿತಪಡಿಸಿಕೊಳ್ಳಬೇಕು. ಅನಧಿಕೃತ ಶಾಲೆಗಳಿಗೆ ಮಕ್ಕಳನ್ನು ದಾಖಲಿಸಿದರೆ ಪೋಷಕರೇ ಹೊಣೆಗಾರರು ಎಂದು ಶಾಲಾ ಶಿಕ್ಷಣ ಇಲಾಖೆ ಚಿತ್ರದುರ್ಗ ಕ್ಷೇತ್ರ ಶಿಕ್ಷಣಾಧಿಕಾರಿ ಎಸ್.ನಾಗಭೂಷಣ್ ಎಚ್ಚರಿಸಿದ್ದಾರೆ.

# ಕಾಸಿಗಾಗಿ ಸುದ್ದಿ, ಜಾಹಿರಾತು ಗಮನಿಸಲು ಸಮಿತಿ: ಡಿಸಿ

» **ಚಿತ್ರದುರ್ಗ**

ಲೋಕಸಭಾ ಸಾರ್ವತ್ರಿಕ ಚುನಾವಣೆ–2024ರ ಹಿನ್ನೆಲೆಯಲ್ಲಿ ಮಾಧ್ಯಮಗಳಲ್ಲಿ ಪ್ರಸಾರವಾಗುವ ಸುದ್ದಿ ಭಾಗಗಳು, ಕಾಸಿಗಾಗಿ ಸುದ್ದಿ ಮತ್ತು ಜಾಹಿರಾತು, ಮಾದರಿ ನೀತಿ ಸಂಹಿತೆಯ ಉಲ್ಲಂಘನೆ ಮತ್ತಿತರ ವಿಷಯಗಳ ಮೇಲೆ ನಿಗಾ ವಹಿಸಲು ಜಿಲ್ಲಾ ಮಾಧ್ಯಮ ಪ್ರಮಾಣೀಕರಣ ಮತ್ತು ಮೇಲುಸ್ತುವಾರಿ ಸಮಿತಿ(ಎಂ.ಸಿ.ಎಂ.ಸಿ.) ಸಕ್ರಿಯವಾಗಿದೆ ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅವರು ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಈ ಸಂಬಂಧ ಪತ್ರಿಕಾ ಹೇಳಿಕೆ ಬಿಡುಗಡೆ ಮಾಡಿರುವ ಅವರು, ದೇಶದ ಸರ್ವೋಚ್ಚ ನ್ಯಾಯಾಲಯದ ಆದೇಶದ ಹಿನ್ನೆಲೆಯಲ್ಲಿ ಭಾರತ ಚುನಾವಣಾ ಆಯೋಗ ವಿವಿಧ ಹಂತಗಳಲ್ಲಿ ಮಾಧ್ಯಮ ಪ್ರಮಾಣೀಕರಣ ಮತ್ತು ಕಣ್ಗಾವಲು ಸಮಿತಿಯನ್ನು ರಚಿಸಿದ್ದು. ಮುದ್ರಣ ಮತ್ತು ವಿದ್ಯುನ್ಮಾನ ಮಾಧ್ಯಮಗಳಲ್ಲಿ ರಾಜಕೀಯ ಸ್ವರೂಪದ ಜಾಹಿರಾತುಗಳನ್ನು ಪ್ರಸಾರ ಮಾಡುವ ಮುನ್ನ ಕಡ್ಡಾಯವಾಗಿ ಈ ಸಮಿತಿಯಿಂದ ಅನುಮೋದನೆ ಪಡೆದು, ಪ್ರಸಾರಕ್ಕೆ ಬಳಸಬಹುದಾಗಿದೆ ಎಂದವರು ತಿಳಿಸಿದ್ದಾರೆ.

ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ಮಾಧ್ಯಮ ಪ್ರಮಾಣೀಕರಣ ಹಾಗೂ ಕಣ್ಗಾವಲು ಸಮಿತಿ ಕಾರ್ಯನಿರ್ವಹಿಸುತ್ತಿದ್ದು, ಮಾಧ್ಯಮಗಳಲ್ಲಿ ಪ್ರಕಟವಾಗುವ ಜಾಹಿರಾತುಗಳು, ಸುದ್ದಿ ರೂಪದ ಜಾಹಿರಾತುಗಳ ಬಗ್ಗೆ ನಿಗಾ ವಹಿಸಲಿದೆ ಅಲ್ಲದೇ ಕಾಲಕಾಲಕ್ಕೆ ಸಂಬಂಧಿಸಿದ ಚುನಾವಣಾ ಕಾರ್ಯ ನಿರ್ವಹಿಸುವ ವಿವಿಧ ಸಮಿತಿಗಳಿಗೆ ಮುಂದಿನ ಕ್ರಮಕ್ಕಾಗಿ ಮಾಹಿತಿ ರವಾನಿಸಲಿದೆ.



ಅಂತೆಯೇ ಪ್ರಕಟಿತ ವಿಷಯಗಳ ಕುರಿತು ಜಿಲ್ಲಾ ಚುನಾವಣಾಧಿಕಾರಿಗಳಿಗೆ ಹಾಗೂ ವೆಚ್ಚ ವೀಕ್ಷಕರಿಗೆ ಪ್ರತಿದಿನ ವರದಿ ನೀಡಲಿದೆ ಎಂದವರು ತಿಳಿಸಿದ್ದಾರೆ.

ದೂರದರ್ಶನ, ರೇಡಿಯೋ, ಕೇಬಲ್ ಟೆಲಿವಿಷನ್ ಹಾಗೂ ದಿನಪತ್ರಿಕೆಗಳು (ಪತ್ರಿಕಾ ಮಾಧ್ಯಮಗಳು ಆನ್‌ಲೈನ್ ಸಂಚಿಕೆ ಹೊಂದಿರುವುದರಿಂದ ಅದನ್ನು ವಿದ್ಯುನ್ಮಾನ ಸ್ವರೂಪದ ಜಾಹಿರಾತು ಎಂದೇ ಪರಿಗಣಿಸಲಾಗುತ್ತದೆ.) ಸೋಷಿಯಲ್ ಮೀಡಿಯಾ ಪ್ಲಾಟ್‌ಫಾರ್ಮ್ ಮುಂತಾದ ವಿದ್ಯುನ್ಮಾನ ಸ್ವರೂಪದ ಜಾಹಿರಾತುಗಳನ್ನು ಪ್ರಸಾರ ಮಾಡುವ ಮುನ್ನ ಮಾಧ್ಯಮ ಪ್ರಮಾಣಿಕರಣ ಸಮಿತಿಯಿಂದ ಕಡ್ಡಾಯವಾಗಿ ನಿಯಮಾನುಸಾರ ಅನುಮೋದನೆ ಪಡೆದುಕೊಳ್ಳಬೇಕು ಎಂದವರು ತಿಳಿಸಿದ್ದಾರೆ.

ಮಾಧ್ಯಮಗಳ ಪ್ರಸಾರದ ಮೇಲೆ ನಿಗಾವಹಿಸಲು ಭದ್ರಾ ಮೇಲ್ದಂಡೆ ಕಚೇರಿಯ ಮೂರನೇ ಮಹಡಿಯಲ್ಲಿ ಮೀಡಿಯಾ ಮಾನಿಟರಿಂಗ್ ಸೆಲ್‌ನ್ನು ಸ್ಥಾಪಿಸಲಾಗಿದೆ. ಇಲ್ಲಿ ಚುನಾವಣಾ ಕರ್ತವ್ಯನಿರತ ಅಧಿಕಾರಿ–ಸಿಬ್ಬಂದಿಗಳು ಎಲ್ಲಾ ಮಾಧ್ಯಮಗಳ ಪ್ರಕಟಣೆ ಮತ್ತು ಪ್ರಸಾರ ಮೇಲೆ ವಿಶೇಷ ಗಮನಹರಿಸುವರು ಎಂದವರು ತಿಳಿಸಿದ್ದಾರೆ.

ಸಾಮಾಜಿಕ ಜಾಲತಾಣ ಒಳಗೊಂಡಂತೆ ವಿದ್ಯುನ್ಮಾನ ಮಾಧ್ಯಮಗಳಲ್ಲಿ ಪ್ರಸಾರ ಮಾಡಲು ಉದ್ದೇಶಿಸಿರುವ ಜಾಹಿರಾತು ವಿಷಯ ಪ್ರಮಾಣೀಕರಣಕ್ಕೆ ಲೋಕಸಭಾ ಚುನಾವಣೆಯ ಉಮೇದುವಾರರು ಹಾಗೂ ರಾಜಕೀಯ ಪಕ್ಷಗಳು ನಿಗಧಿತ ನಮೂನೆಗಳಲ್ಲಿ ಜಿಲ್ಲಾ ಎಂ.ಸಿ.ಎಂ.ಸಿ. ಸಮಿತಿಗೆ ಅರ್ಜಿ ಸಲ್ಲಿಸಬೇಕು. ಈ ಕುರಿತು ಅನುಮೋದನೆಯನ್ನು ಪಡೆಯಲು ಸಹಾಯಕ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಜಿಲ್ಲಾಧಿಕಾರಿಗಳ ಕಚೇರಿ ಆವರಣ, ಚಿತ್ರದುರ್ಗ ಇಲ್ಲಿ ಸಂಪರ್ಕಿಸಬಹುದಾಗಿದೆ ಎಂದವರು ತಿಳಿಸಿದ್ದಾರೆ.ಒಂದು ವೇಳೆ ಅನುಮೋದನೆ ಪಡೆಯದೇ ಜಾಹಿರಾತು ಪ್ರಸಾರವಾದಲ್ಲಿ ಅದನ್ನು ಚುನಾವಣಾ ಅಕ್ರಮ ಎಂದು ಪರಿಗಣಿಸಿ, ಮಾಧ್ಯಮ ಮೇಲುಸ್ತುವಾರಿ ಸಮಿತಿಯು ಈ ಬಗ್ಗೆ ಅಗತ್ಯ ಕ್ರಮಕ್ಕಾಗಿ ಚುನಾವಣಾಧಿಕಾರಿಗಳಿಗೆ ವರದಿ ಮಾಡಲಿದೆ. ಅಭ್ಯರ್ಥಿಗಳ ಗಮನಕ್ಕೆ ತಾರದೆ ಬೇರೆಯವರು ಅಭ್ಯರ್ಥಿಯ ಹೆಸರಿನಲ್ಲಿ ಜಾಹಿರಾತು ಪ್ರಕಟಿಸುವಂತಿಲ್ಲ ಎಂದವರು ತಿಳಿಸಿದ್ದಾರೆ.

ಪುಟ ↘ 2

# ಬಾಬು ಜಗಜೀವನ್ ರಾಮ್ ಜನ್ಮ ದಿನ: ಸರಳ ಆಚರಣೆ



» **ಚಿತ್ರದುರ್ಗ**

ಚಿತ್ರದುರ್ಗ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಶುಕ್ರವಾರ ಹಸಿರು ಕ್ರಾಂತಿ ಹರಿಕಾರ, ಮಾಜಿ ಉಪ ಪ್ರಧಾನಿ ಡಾ.ಬಾಬು ಜಗಜೀವನ್ ರಾಮ್ ಅವರ 117ನೇ ಜನ್ಮ ದಿನಾಚರಣೆ ಕಾರ್ಯಕ್ರಮವನ್ನು ಸರಳವಾಗಿ ಆಚರಿಸಲಾಯಿತು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಸಮಾಜ ಕಲ್ಯಾಣ ಇಲಾಖೆ ಹಾಗೂ ನಗರಸಭೆ ವತಿಯಿಂದ ಡಾ.ಬಾಬು ಜಗಜೀವನರಾಂ ಅವರ 117ನೇ ಜನ್ಮ ದಿನಾಚರಣೆ ಕಾರ್ಯಕ್ರಮವನ್ನು ಲೋಕಸಭಾ ಸಾರ್ವತ್ರಿಕ ಚುನಾವಣೆ ನೀತಿ ಸಂಹಿತೆ ಜಾರಿ ಹಿನ್ನಲೆಯಲ್ಲಿ ಸರಳವಾಗಿ ಹಮ್ಮಿಕೊಳ್ಳಲಾಗಿತ್ತು. ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್ ಅವರು ಡಾ.ಬಾಬು ಜಗಜೀವನರಾಂ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಗೌರವ ಸಮರ್ಪಿಸಿದರು.



ನಿವೃತ್ತ ಪ್ರಾಂಶುಪಾಲ ಹಾಗೂ ಸಾಹಿತಿ ಪ್ರೊ.ಲಿಂಗಪ್ಪ ಅವರು ಡಾ.ಬಾಬು ಜಗಜೀವನ್‌ರಾಂ ಅವರ ಕುರಿತು ಉಪನ್ಯಾಸ ನೀಡಿದರು. ಈ ಸಂದರ್ಭದಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಸ್.ಜೆ.ಕುಮಾರಸ್ವಾಮಿ, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಓ.ಪರಮೇಶ್ವರಪ್ಪ ಸೇರಿದಂತೆ ವಿವಿಧ ಇಲಾಖೆಯ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಹಾಗೂ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಇತರೆ ಸಮುದಾಯಗಳ ಮುಖಂಡರು, ಸಂಘಟನೆಗಳ ಪದಾಧಿಕಾರಿಗಳು ಇದ್ದರು.




## ಫಾಸ್ಟ್ ನ್ಯೂಸ್

### ಪವಿತ್ರ ಮಹಿಳಾ ಕಾಂಗ್ರೆಸ್ ಜಿಲ್ಲಾ ಉಪಾಧ್ಯಕ್ಷ

» ಚಿತ್ರದುರ್ಗ



ಶ್ರೀಮತಿ ಪವಿತ್ರ ರವರನ್ನು ಚಿತ್ರದುರ್ಗ ಮಹಿಳಾ ಕಾಂಗ್ರೆಸ್ ಸಮಿತಿಯ ಜಿಲ್ಲಾ ಉಪಾಧ್ಯಕ್ಷರಾಗಿ ನೇಮಕ ಮಾಡಲಾಗಿದೆ ಎಂದು ಚಿತ್ರದುರ್ಗ ಜಿಲ್ಲಾ ಮಹಿಳಾ ಕಾಂಗ್ರೆಸ್ ಸಮಿತಿಯ ಜಿಲ್ಲಾಧ್ಯಕ್ಷರಾದ ಶ್ರೀಮತಿ ಗೀತಾನಂದಿನಿಗೌಡ ತಿಳಿಸಿದ್ದಾರೆ.ಇವರನ್ನು ಕರ್ನಾಟಕ ಪ್ರದೇಶ ಮಹಿಳಾ ಕಾಂಗ್ರೆಸ್ ಸಮಿತಿಯ ಅಧ್ಯಕ್ಷರಾದ ಡಾ.ಪುಷ್ಪ ಅಮರನಾಥ್ ರವರ ಅನುಮೋದನೆ ಮತ್ತು ಚಿತ್ರದುರ್ಗ ಜಿಲ್ಲಾ ಕಾಂಗ್ರೆಸ್ ಸಮಿತಿಯ ಅಧ್ಯಕ್ಷರಾದ ಎಂ.ಕೆ.ತಾಜ್‌ಪೀರ್ ರವರ ಸೂಚನೆಯ ಮೇರೆಗೆ ಹಾಗೂ ಶಾಸಕರಾದ ಕೆ.ಸಿ.ವಿರೇಂದ್ರಪಪ್ಪಿರವರ ಶಿಫಾರಸ್ಸಿನ ಮೇರೆಗೆ ಇವರನ್ನು ನೇಮಕ ಮಾಡಲಾಗಿದೆ. ಮುಂದಿನ ದಿನದಲ್ಲಿ ಜಿಲ್ಲಾ ಸಮಿತಿಯ ಮಾರ್ಗದರ್ಶನದಲ್ಲಿ ಹಿರಿಯರ ಮತ್ತು ಸ್ಥಳಿಯ ನಾಯಕರು ಸಹಯೋಗದಲ್ಲಿ ಪಕ್ಷದ ಸಂಘಟನೆ ಮತ್ತು ಬಲವರ್ಧನೆಗೆ ಕಾರ್ಯೋನ್ಮುಖರಾಗಬೇಕೆಂದು ಸೂಚಿಸಿದ್ದಾರೆ. ಶ್ರೀಮತಿ ಪವಿತ್ರರವರು ಈ ಹಿಂದೆ ಜಿಲ್ಲಾ ಕಾಂಗ್ರೆಸ್ ಸೇವಾದಳದ ಕಾರ್ಯದರ್ಶಿಯಾಗಿ ಕೆಲಸವನ್ನು ಮಾಡಿದ ಅನುಭವ ಇದೆ, ಇದ್ದಲ್ಲದೆ ಈಡಿಗ ಸಮಾಜದ ಪದಾಧಿಕಾರಿಗಳಾಗಿದ್ದು, ಕಾರ್ಮಿಕ ಮತ್ತು ಅಹಿಂದ ಸಂಘಟನೆಯ ಹಾಲಿ ಜಿಲ್ಲಾಧ್ಯಕ್ಷರಾಗಿ, ವಾಸುದೇವ ಮೇಟಿ ಬಣದ ರೈತ ಸಂಘದ ಚಿತ್ರದುರ್ಗ ತಾಲ್ಲೂಕು ಸಂಘದ ಅಧ್ಯಕ್ಷರಾಗಿ ಕೆಲಸವನ್ನು ನಿರ್ವಹಿಸುತ್ತಿದ್ದಾರೆ.

### ಲೋಕಸಭಾ ಚುನಾವಣೆ: ವೀಕ್ಷಕರ ನೇಮಕ

» ಚಿತ್ರದುರ್ಗ

ಭಾರತ ಚುನಾವಣಾ ಆಯೋಗವು ಚಿತ್ರದುರ್ಗ ಲೋಕಸಭಾ ಚುನಾವಣೆಗೆ ಸಂಬಂಧಿಸಿದಂತೆ ಮೂವರು ಹಿರಿಯ ಶ್ರೇಣಿ ಅಧಿಕಾರಿಗಳನ್ನು ಚುನಾವಣಾ ವೀಕ್ಷಕರನ್ನಾಗಿ ನೇಮಿಸಿ ಆದೇಶ ಹೊರಡಿಸಿದೆ. ಈ ಚುನಾವಣೆಯ ಸಾಮಾನ್ಯ ವೀಕ್ಷಕರಾಗಿ ಹಿರಿಯ ಐಎಎಸ್. ಅಧಿಕಾರಿ ಮನೋಹರ ಮರಾಂಡಿ – ಮೊ.8951198644 ಹಾಗೂ ಶಾಂತಿ–ಸುವ್ಯವಸ್ಥೆಯ (ಪೊಲೀಸ್) ವೀಕ್ಷಕರಾಗಿ ಹಿರಿಯ ಪೊಲೀಸ್ ಅಧಿಕಾರಿ ನಜ್ಮುಲ್ ಹೊಡ  ಮೊ.9113093298 ಇವರುಗಳನ್ನು ಆಯೋಗವು ನಿಯೋಜಿಸಿದೆ. ಸಾರ್ವಜನಿಕರು ಚುನಾವಣೆಗೆ ಸಂಬಂಧಿಸಿದ ದೂರುಗಳಿಗೆ ಸದರಿ ವೀಕ್ಷಕರನ್ನು ಅಥವಾ ಅವರ ಸಂಪರ್ಕಾಧಿಕಾರಿಗಳನ್ನು ಚಿತ್ರದುರ್ಗದ ಬಿ.ಡಿ.ರಸ್ತೆಯ ಪ್ರವಾಸಿ ಮಂದಿರದಲ್ಲಿ ಖುದ್ದಾಗಿ ಅಥವಾ ದೂರವಾಣಿ ಮೂಲಕ ಸಂಪರ್ಕಿಸಿ, ಪರಿಹಾರ ಕಂಡುಕೊಳ್ಳಬಹುದಾಗಿದೆ ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ.

### ಕಾಸಿಗಾಗಿ ಸುದ್ದಿ, ಜಾಹಿರಾತು ಗಮನಿಸಲು ಸಮಿತಿ: ಡಿಸಿ

» ಮೊದಲ ಪುಟದಿಂದ

ಪತ್ರಿಕೆಗಳಲ್ಲಿ ಹಾಗೂ ವಿದ್ಯುನ್ಮಾನ ಮಾಧ್ಯಮಗಳಲ್ಲಿ ಪ್ರಕಟವಾಗುವ ಸುದ್ದಿ ರೂಪದ ಜಾಹಿರಾತುಗಳ(ಕಾಸಿಗಾಗಿ ಸುದ್ದಿ) ಬಗ್ಗೆಯೂ ಸಮಿತಿ ಗಮನಹರಿಸಲಿದೆ. ಕಾಸಿಗಾಗಿ ಸುದ್ದಿ ಎಂದು ಪರಿಗಣಿಸಲಾಗುವ ಈ ಪ್ರಕರಣಗಳನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಜಾಹಿರಾತು ದರ ಅನ್ವಯಿಸಿ, ಅಭ್ಯರ್ಥಿಗಳ ಚುನಾವಣಾ ವೆಚ್ಚಕ್ಕೆ ಸೇರಿಸಲಾಗುವುದು. ಈ ಕಾಸಿಗಾಗಿ ಸುದ್ದಿ ಪ್ರಕಟಿಸಿದ ಮಾಧ್ಯಮಗಳ ಬಗ್ಗೆ ಮುಂದಿನಕ್ರಮಕ್ಕಾಗಿಮುಖ್ಯಚುನಾವಣಾಧಿಕಾರಿಗಳ ಮೂಲಕ ಭಾರತ ಚುನಾವಣಾ ಆಯೋಗಕ್ಕೆ ವರದಿ ಮಾಡಲಾಗುವುದು ಎಂದು ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಚುನಾವಣಾಧಿಕಾರಿಗಳು ಹಾಗೂ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ.

### ಮಾಡದಕೆರೆ ಬಳಿ ಲಾರಿ ಪಟ್ಟಿಯಾಗಿ ಚಾಲಕ ಸಾವು



» ಹೊಸದುರ್ಗ

ತಾಲೂಕಿನ ಮಾಡದಕೆರೆ ಗ್ರಾಮದ ಸಮೀಪವಿರುವ ಕ್ರಾಸ್ ನಲ್ಲಿ ಲಾರಿಯೊಂದು ಗುರುವಾರ ಮಧ್ಯಾಹ್ನ 3 ಗಂಟೆ ಸುಮಾರಿನಲ್ಲಿ ಹಿರಿಯೂರು ಮಾರ್ಗವಾಗಿ ಬರುತ್ತಿರುವ ವೇಳೆ ಚಾಲಕನ ನಿಯಂತ್ರಣ ತಪ್ಪಿ ರಸ್ತೆ ಬದಿಯ ಗುಂಡಿಗೆ ಪಲ್ಟಿಯಾದ ಪರಿಣಾಮ ಚಾಲಕನ ದೇಹಕ್ಕೆ ಗಂಭೀರ ಗಾಯಗಳಾಗಿ ಚಾಲಕ ಸ್ಥಳದಲ್ಲಿ ಸಾವನ್ನಪ್ಪಿದ್ದಾನೆ. ಲಾರಿಯಲ್ಲಿದ್ದ ಮತ್ತೊಬ್ಬನಿಗೆ ಕೈ ಕಾಲು ಮತ್ತು ತಲೆಗೆ ಗಾಯಗಳಾಗಿದ್ದು, ಚಿಕಿತ್ಸೆಗಾಗಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಮೃತ ಚಾಲಕನನ್ನು ಚಳ್ಳಕೆರೆ ತಾಲೂಕಿನ ಹುಲ್ಲು ಕುಂಟೆ ಗ್ರಾಮದ 29 ವರ್ಷ ವಯಸ್ಸಿನ ರಂಗಸ್ವಾಮಿ ಎಂದು ಹೇಳಲಾಗಿದ್ದು, ಈ ಬಗ್ಗೆ ಹೊಸದುರ್ಗ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಬಾಲ್ಯ ವಿವಾಹದ ಬಗ್ಗೆ ಜಾಗೃತಿ ಮೂಡಿಸಿ

» ದಾವಣಗೆರೆ



ಬಾಲ್ಯ ವಿವಾಹ, ಬಾಲ ಕಾರ್ಮಿಕ ಪದ್ಧತಿ ನಿಷೇಧ ಮತ್ತು ಬಾಲ ನ್ಯಾಯ ಕಾಯಿದೆ ಸೇರಿದಂತೆ ಜನರಿಗಾಗಿ ರೂಪಿಸಲಾದ ಕಲ್ಯಾಣ ಕಾರ್ಯಕ್ರಮಗಳ ಬಗ್ಗೆ ಇಲಾಖೆಗಳು ಹೆಚ್ಚು ಜಾಗೃತಿ ಮೂಡಿಸಲು ಮುಂದಾಗಬೇಕೆಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಅಧ್ಯಕ್ಷರಾದ ರಾಜೇಶ್ವರಿ.ಎನ್.ಹೆಗಡೆ ತಿಳಿಸಿದರು.

ಪ್ರಧಾನಜಿಲ್ಲಾಮತ್ತುಸತ್ರನ್ಯಾಯಾಲಯದ ಸಭಾಂಗಣದಲ್ಲಿ ಕರೆಯಲಾಗಿದ್ದ ಯುಟಿಆರ್‌ಸಿ, ಬಾಲನ್ಯಾಯ ಕಾಯಿದೆ, ಮಾನವ ಕಳ್ಳಸಾಗಣೆ ತಡೆ, ಪೋಕ್ಸೋ ಕಾಯಿದೆ ಅನುಷ್ಠಾನ ಹಾಗೂ ವಿವಿಧ ಇಲಾಖೆಗಳ ಕಲ್ಯಾಣ ಕಾರ್ಯಕ್ರಮಗಳ ಅನುಷ್ಠಾನದ ಬಗ್ಗೆ ಜಿಲ್ಲಾ ಮಟ್ಟದ ಅಧಿಕಾರಿಗಳ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಬಾಲ್ಯ ವಿವಾಹ; ಬಾಲ್ಯ ವಿವಾಹ ತಡೆಗಟ್ಟಲು ಇರುವ ಕಾನೂನು ಮತ್ತು ಇದರಿಂದ ಮಕ್ಕಳ ಮೇಲಾಗುವ ದೈಹಿಕ, ಸಾಮಾಜಿಕ, ಶೈಕ್ಷಣಿಕವಾಗಿ ಆಗುವ ತೊಂದರೆಗಳ ಬಗ್ಗೆ ತಿಳಿಸಬೇಕು. ಅಪ್ರಾಪ್ತ ವಯಸ್ಸಿನಲ್ಲಿ ವಿವಾಹವಾದರೆ ಮುಂದೆ ಆಗುವ ತೊಂದರೆಗಳ ಬಗ್ಗೆ ಮಕ್ಕಳಲ್ಲಿ ಅರಿವು ಮೂಡಿಸಬೇಕು. ಬಾಲ್ಯದಲ್ಲಿ ಮದುವೆಯಾಗುವ ಹುಡುಗಿಯರು ಸಾಮಾನ್ಯವಾಗಿ ಶಿಕ್ಷಣ ಮತ್ತು ಭವಿಷ್ಯದ ವೃತ್ತಿ ಅವಕಾಶಗಳ ಪ್ರವೇಶವನ್ನು ಹೊಂದಿರುವುದಿಲ್ಲ. ಆರಂಭಿಕ ಗರ್ಭಧಾರಣೆ ಮತ್ತು ಹೆರಿಗೆಯ ಪರಿಣಾಮವಾಗಿ ಆರೋಗ್ಯದ ಮೇಲೆ ಪ್ರತಿಕೂಲ ಪರಿಣಾಮ ಬೀರುವುದು ಸಾಮಾನ್ಯವಾಗಿದೆ ಎಂದರು.

ಇಲಾಖೆ ಅಧಿಕಾರಿಗಳು ಮಾಹಿತಿ ನೀಡಿ 2024 ರ ಜನವರಿಯಿಂದ ಇಲ್ಲಿಯವರೆಗೆ ಬಾಲ್ಯ ವಿವಾಹ ತಡೆ ಬಗ್ಗೆ 25 ದೂರುಗಳು ಸ್ವೀಕೃತವಾಗಿದ್ದು 22 ಪ್ರಕರಣಗಳಲ್ಲಿ ಬಾಲ್ಯ ವಿವಾಹ ತಡೆಗಟ್ಟಲಾಗಿದೆ. ಮತ್ತು ಉಳಿದ ಪ್ರಕರಣಗಳಲ್ಲಿ ಕಾನೂನು ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದಾಗ ತಡೆಯಲಾದ ಪ್ರಕರಣಗಳಲ್ಲಿ ಮಕ್ಕಳ ಮುಂದಿನ ಭವಿಷ್ಯಕ್ಕಾಗಿ ಪುನರ್ವಸತಿ ಕಲ್ಪಿಸಬೇಕೆಂದು ತಿಳಿಸಿದ ಅವರು ಅಂಗನವಾಡಿ ಕಾರ್ಯಕರ್ತೆಯರ ಮೂಲಕ ಗರ್ಭಿಣಿಯರಿಗೆ ಹಾಗೂ ಬಾಣಂತಿಯರಿಗೆ ಆರೋಗ್ಯ ತಪಾಸಣೆ ಮಾಡಿಸುವ ಮೂಲಕ ಪೌಷ್ಟಿಕ ಆಹಾರ ನೀಡಲು ಕ್ರಮ ವಹಿಸಬೇಕೆಂದರು.

ಪೋಕ್ಸೋ ಕಾಯಿದೆ; ಪೋಕ್ಸೋ ಪ್ರಕರಣದಲ್ಲಿ ಸಂತ್ರಸ್ಥರಾಗುವವರಿಗೆ ತಕ್ಷಣವೇ ಸೂಕ್ತ ಕ್ರಮ ಕೈಗೊಂಡು ಪುನರ್ವಸತಿ ಕಲ್ಪಿಸುವ ಕೆಲಸ ಮಾಡಬೇಕು. ಕಾಯಿದೆಯಡಿ ಪ್ರಕರಣ ದಾಖಲಿಸುವಾಗ ಸಂತ್ರಸ್ಥರು ಇದ್ದ ಕಡೆಯೇ ಹೋಗಿ ಮಾಹಿತಿ, ಹೇಳಿಕೆ ಪಡೆದುಕೊಂಡು ಬರಬೇಕು. ಆದರೆ ಅವರನ್ನು ನೀವಿರುವಲ್ಲಿಗೆ ಕರೆದುಕೊಂಡು ಬರಬಾರದು. ಆದರೆ ಇವರನ್ನು ಬಾಲಮಂದಿರದಲ್ಲಿ ಇಟ್ಟುಕೊಳ್ಳಬಾರದು ಎಂದರು.ತಂಬಾಕು ಮುಕ್ತ ವಲಯ ಫಲಕ; ಶಾಲಾ, ಕಾಲೇಜುಗಳ ವ್ಯಾಪ್ತಿಯಲ್ಲಿ ತಂಬಾಕು ಮಾರಾಟ ನಿಯಂತ್ರಣ ಕುರಿತಂತೆ ಹೆಚ್ಚಿನದಾಗಿ ಜಾಗೃತಿ ಮೂಡಿಸಬೇಕು. ಹಾಗೂ ಎಲ್ಲಾ ಶಿಕ್ಷಣ ಸಂಸ್ಥೆ ಮತ್ತು ಸರ್ಕಾರಿ ಕಚೇರಿಗಳಲ್ಲಿ ಕಡ್ಡಾಯವಾಗಿ ತಂಬಾಕು ಮುಕ್ತ ವಲಯ ನಾಮಫಲಕಗಳನ್ನು ಅಳವಡಿಸಬೇಕು. ಜಿಲ್ಲೆಯಲ್ಲಿರುವ ಎಲ್ಲಾ ಶೈಕ್ಷಣಿಕ ಸಂಸ್ಥೆಗಳನ್ನು ತಂಬಾಕು ಮುಕ್ತ ಶೈಕ್ಷಣಿಕ ಸಂಸ್ಥೆಗಳನ್ನಾಗಿ ಮಾಡುವ ನಿಟ್ಟಿನಲ್ಲಿ ಶಾಲಾ ಕಾಲೇಜುಗಳಲ್ಲಿ ಜಾಗೃತಿ ಕಾರ್ಯಕ್ರಮಗಳನ್ನು ನಡೆಸಬೇಕು ಎಂದರು.

ನಿರ್ಗತಿಕ ಕುಟೀರದ ಬದಲಾಗಿ ಬಾಲ ಮಂದಿರಕ್ಕೆ ದಾಖಲಿಸಿ; ಭಿಕ್ಷಾಟನೆಯಲ್ಲಿ ತೊಡಗಿರುವ ಮಕ್ಕಳನ್ನು ಖಾಸಗಿ ಅನುದಾನಿತ ಕುಟೀರಕ್ಕೆ ಸೇರಿಸುವ ಬದಲಾಗಿ ಸರ್ಕಾರಿ ಬಾಲಕರ ಬಾಲ ಮಂದಿರದಲ್ಲಿ ದಾಖಲು ಮಾಡುವ ಮೂಲಕ ಅವರ ಮುಂದಿನ ಭವಿಷ್ಯಕ್ಕೆ ಪೂರಕವಾದ ವಾತಾವರಣ ಕಲ್ಪಿಸಲು ಹಾಗೂ ಅವರು ಶೈಕ್ಷಣಿಕವಾಗಿ ಮುಂದುವರೆಯಲು ಶಾಲೆಗೆ ಪ್ರವೇಶ ಕಲ್ಪಿಸಬೇಕು ಎಂದ ಅವರು ಸಮಾಜ ಕಲ್ಯಾಣ ಇಲಾಖೆ ಹಾಸ್ಟೆಲ್‌ನಲ್ಲಿ ಊಟದ ಗುಣಮಟ್ಟದ ಬಗ್ಗೆ ಪರಿಶೀಲನೆ ನಡೆಸಲು ಸಮಾಜ ಕಲ್ಯಾಣಾಧಿಕಾರಿಗೆ ತಿಳಿಸಿದರು.

ಇದೇ ವೇಳೆ ವೇಶ್ಯಾವಾಟಿಕೆಗೆ ನಿಯಂತ್ರಣಕ್ಕೆ ಸಂಬಂಧಿಸಿದಂತೆ ಪೊಲೀಸ್ ಇಲಾಖೆಯಿಂದ ಜನವರಿ–24 ರಿಂದ ಮಾರ್ಚ್ ವರೆಗೆ 3 ಪ್ರಕರಣಗಳು ದಾಖಲಾಗಿವೆ ಎಂದು ಹೆಚ್ಚುವರಿ ಪೊಲೀಸ್ ಅಧೀಕ್ಷಕರಾದ ವಿಜಯಕುಮಾರ್ ಎಂ. ಸಂತೋಷ್ ತಿಳಿಸಿದರು.

ಹೆಗಡೆ ನಗರದಲ್ಲಿರುವ ಮಕ್ಕಳ ವಿದ್ಯಾಭ್ಯಾಸಕ್ಕಾಗಿ ಶಾಲಾ ಕಟ್ಟಡವನ್ನು ನಿರ್ಮಿಸುವಂತೆ ತಿಳಿಸಿದಾಗ ಅದಕ್ಕೆ ಜಿ.ಪಂ. ಸಿಇಓ ಸುರೇಶ್ ಬಿ.ಇಟ್ನಾಳ್ ಪ್ರತಿಕ್ರಿಯಿಸಿ ಮಕ್ಕಳ ವಿದ್ಯಾಭ್ಯಾಸಕ್ಕಾಗಿ ಹೊಸ ಶಾಲಾ ಕಟ್ಟಡವನ್ನು ನಿರ್ಮಿಸಲಾಗುತ್ತದೆ ಎಂದರು.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಮಹಾವೀರ .ಮ.ಕರೆಣ್ಣನವರ ಮಾತನಾಡಿ ಕಂದಾಯ ಇಲಾಖೆಯಲ್ಲಿ ಮರಣ ಪ್ರಮಾಣ ಪತ್ರ ಇಲ್ಲವೆಂಬ ಕಾರಣಕ್ಕಾಗಿ ಪೌತಿ ಖಾತೆ ಬದಲಾವಣೆ ಮಾಡುತ್ತಿಲ್ಲ. ಅದನ್ನು ಪರಿಶೀಲಿಸಿ ಮಾಹಿತಿ ನೀಡಲು ತಿಳಿಸಿ ಎಲ್ಲಾ ಇಲಾಖೆಗಳು ಜನರ ಕಲ್ಯಾಣಕ್ಕಾಗಿ ರೂಪಿಸಲಾದ ಯೋಜನೆ, ಸೌಲಭ್ಯಗಳ ಕುರಿತು ಮಾಹಿತಿಯನ್ನು ನೀಡಬೇಕು. ಈ ಮಾಹಿತಿಯನ್ನು ಸಂಗ್ರಹಿಸಿ ಕಿರುಹೊತ್ತಿಗೆ ತರುವ ಮೂಲಕ ಜನರಿಗೆ ತಲುಪಿಸುವ ಕೆಲಸ ಮಾಡಲಾಗುತ್ತದೆ ಎಂದರು.

ಜಿ.ಪಂ. ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಸುರೇಶ್.ಬಿ.ಇಟ್ನಾಳ್, ಅಪರ ಜಿಲ್ಲಾಧಿಕಾರಿ ಸೈಯ್ಯದಾ ಆಫ್ರೀನ್ ಭಾನು. ಎಸ್.ಬಳ್ಳಾರಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪನಿರ್ದೇಶಿಕಿ ವಾಸಂತಿ ಉಪ್ಪಾರ್, ಡಿಹೆಚ್‌ಓ ಡಾ.ಷಣ್ಮುಖಪ್ಪ, ಆರ್‌ಸಿಹೆಚ್ ಅಧಿಕಾರಿ ರೇಣುಕಾರಾಧ್ಯ, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ಎಲ್.ಹೆಚ್.ಅರುಣಕುಮಾರ್ ಹಾಗೂ ಉಪಸ್ಥಿತರಿದ್ದರು.

## ದೇಶದ ಜನರ ಹಸಿವು ನೀಗಿಸಲು ಶ್ರಮಿಸಿದ್ದ ಬಾಬೂಜಿ

» ಹೊಸದುರ್ಗ



ಹಸಿರು ಕ್ರಾಂತಿಯ ಹರಿಕಾರರೆಂದೇ ಖ್ಯಾತಿ ಪಡೆದಿರುವ ಡಾ.ಬಾಬು ಜಗಜೀವನ್ ರಾಮ್ ರವರು ಶೋಷಿತ ಸಮಾಜದಲ್ಲಿ ಜನಿಸಿ, ಬಾಲ್ಯದಲ್ಲಿ ಬಹಳಷ್ಟು ಕಷ್ಟ ಮತ್ತು ಸಮಸ್ಯೆಗಳಿದ್ದರೂ ಎಲ್ಲವನ್ನು ಮೆಟ್ಟಿ ನಿಂತು ದೇಶದ ಪ್ರಗತಿಗಾಗಿ ಬಹುದೊಡ್ಡ ಸೇವೆ ಸಲ್ಲಿಸಿದ್ದಾರೆ. ಹಸಿರು ಕ್ರಾಂತಿಯ ಮೂಲಕ ದೇಶದ ಬಡಜನರ ಹಸಿವು ನೀಗಿಸಲು ಶ್ರಮಿಸಿದ್ದ ಮಹಾನ್ ವ್ಯಕ್ತಿ ಎಂದು ತಹಸೀಲ್ದಾರ್ ತಿರುಪತಿ ಪಾಟೀಲ್ ಹೇಳಿದರು.

ಪಟ್ಟಣದ ತಾಲೂಕು ಕಚೇರಿಯಲ್ಲಿ ತಾಲೂಕು ಆಡಳಿತದ ವತಿಯಿಂದ ಶುಕ್ರವಾರ ಆಯೋಜಿಸಿದ್ದ ಡಾ.ಬಾಬು ಜಗಜೀವನ್ ರಾಮ್ ರವರ ಜಯಂತಿ ನೇತೃತ್ವ ವಹಿಸಿ ಅವರು ಮಾತನಾಡಿದರು.

ಬಾಬು ಜಗಜೀವನ್ ರಾಮ್ ಅವರು ಸೃಷ್ಟಿಸಿದ ಹಸಿರು ಕ್ರಾಂತಿಯಿಂದ ದೇಶದಲ್ಲಿ ಬಡವರಿಗೆ ಆಹಾರದ ಕೊರತೆ ದೂರವಾಯಿತು. ಅಧಿಕಾರ ಮತ್ತು ಆಸ್ತಿಯಿಂದ ಗಳಿಸಲಾಗದ ಕೀರ್ತಿಯನ್ನು ಸೇವೆ ಹಾಗೂ ತ್ಯಾಗದಿಂದ ಗಳಿಸಬಹುದೆಂದು ಬಾಬು ಜಗಜೀವನ್ ರಾಮ್ ರವರ ಬದುಕು ತಿಳಿಸಿಕೊಡುತ್ತದೆ. ಅವರ ನಿಸ್ವಾರ್ಥ ಸೇವೆ, ಸ್ವಾತಂತ್ರ್ಯ ಚಳುವಳಿ ಮತ್ತು ಸಮರ್ಪಣ ಮನೋಭಾವದ ಹೋರಾಟದಿಂದ ಸಮಾಜಕ್ಕೆ ಆದರ್ಶ ವ್ಯಕ್ತಿಯಾಗಿದ್ದಾರೆ. ಆಹಾರ, ರೈಲ್ವೆ, ಸಾರಿಗೆ, ಕಾರ್ಮಿಕ ಅಭಿವೃದ್ಧಿ, ಕೃಷಿ ಮತ್ತು ಉದ್ಯೋಗ ಪುನರ್ ವಸತಿ ಕೆಲಸವನ್ನು ಮಾಡಿದ ಹಿರಿಮೆ ಅವರದು ಎಂದರು. ದೇಶ ಬರಗಾಲ ಇದ್ದಂತಹ ಸಂದರ್ಭದಲ್ಲಿ ಹಸಿರು ಕ್ರಾಂತಿಯ ಮೂಲಕ ದೇಶದ ಜನರ ಹಸಿವನ್ನ ನೀಗಿಸಲು ಪ್ರಮುಖ ಪಾತ್ರ ವಹಿಸಿದ್ದ ವ್ಯಕ್ತಿ ಬಾಬೂಜಿಯಾಗಿದ್ದರು. ಅವರು ದೇಶಕ್ಕೆ ಸಲ್ಲಿಸಿದ ಸೇವೆ ಮತ್ತು ಕೊಡುಗೆ ದೇಶದ ಜನರಿಗೆ ಮಾದರಿಯಾಗಿವೆ. 'ದೇಶದ ಅಭಿವೃದ್ಧಿಯಲ್ಲಿ ನಮ್ಮ ಅಭಿವೃದ್ಧಿ ಅಡಗಿದೆ. ಶಿಕ್ಷಣದ ಮೂಲಕ ಎಲ್ಲವನ್ನ ಸಾಧಿಸಲಿಕ್ಕೆ ಸಾಧ್ಯವಿದೆ' ಎಂದು ಹೇಳಿದ್ದರು. ಅವರು ದೇಶ ಕಂಡ ಶ್ರೇಷ್ಠ ವ್ಯಕ್ತಿಗಳಲ್ಲಿ ಒಬ್ಬರು ಎಂದು ತಿಳಿಸಿದರು. ಈ ವೇಳೆ ತಾಲೂಕು ಪಂಚಾಯಿತಿ ಇಓ ಸುನಿಲ್ ಕುಮಾರ್, ಸಮಾಜ ಕಲ್ಯಾಣ ಇಲಾಖೆ ಅಧಿಕಾರಿ ಕಾಳಮ್ಮ, ಸಹಾಯಕ ಕೃಷಿ ನಿರ್ದೇಶಕ ಈಶ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವಿಸ್ತರಣಾಧಿಕಾರಿ ಶಶಿಧರ್ ಮತ್ತು ರಾಜ್ಯ ಸರ್ಕಾರಿ ನೌಕರರ ಸಂಘದ ತಾಲೂಕು ಅಧ್ಯಕ್ಷ ಗಂಗಾಧರಪ್ಪ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು, ಸಿಬ್ಬಂದಿಗಳು ಮುಖಂಡರು ಪಾಲ್ಗೊಂಡಿದ್ದರು.

## ಖಂಡೇನಹಳ್ಳಿಯಲ್ಲಿ ಡಾ.ಬಾಬು ಜಗಜೀವನ್ ರಾಮ್ ಜಯಂತಿ



» ಹಿರಿಯೂರು

ತಾಲೂಕಿನ ಖಂಡೇನ ಹಳ್ಳಿ ಗ್ರಾಮದಲ್ಲಿ ಭಾರತದ ಉಪಪ್ರಧಾನಿ ಹಸಿರು ಕ್ರಾಂತಿಯ ಹರಿಕಾರಾದ ಡಾ.ಬಾಬು ಜಗಜೀವನ್ ರಾಮ್ ರವರ 117ನೇ ಜಯಂತಿ ಕಾರ್ಯಕ್ರಮವನ್ನು ಏರ್ಪಡಿಸಲಾಗಿತ್ತು. ಕರ್ನಾಟಕ ಸರ್ಕಾರದ ಯೋಜನೆ ಹಾಗು ಸಂಕಿಕ ಇಲಾಖೆ ಸಚಿವರು ಚಿತ್ರದುರ್ಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ. ಸುಧಾಕರ್ ರವರು ಪುಷ್ಪನಮನ ಸಲ್ಲಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರುಗಳಾದ ಖಾದಿ ಜೆ ರಮೇಶ್, ಈರಲಿಂಗೇ ಗೌಡ, ಖಂಡೇನ ಹಳ್ಳಿ ಗ್ರಾಮಪಂಚಾಯ್ತಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ವೆಂಕಟೇಶ್, ಜಿಲ್ಲಾ ಮಹಿಳಾ ಕಾಂಗ್ರೆಸ್ ಅಧ್ಯಕ್ಷರಾದ ಗೀತಾ ನಂದಿನಿಗೌಡ, ಹಿರಿಯ ಜಿಲ್ಲಾ ಡಿಸಿಸಿ ಸದಸ್ಯರಾದ ತಿಮ್ಮಣ್ಣ ಮುಖಂಡರಾದ ಎಸ್ ಆರ್ ತಿಪ್ಪೇಸ್ವಾಮಿ, ನಾಗಣ್ಣ ಗ್ರಾಮಪಂಚಾಯಿತಿ ಅಧ್ಯಕ್ಷರಾದ ಸಾವಿತ್ರಮ್ಮ ಈಶ್ವರಪ್ಪ ಉಪಾಧ್ಯಕ್ಷ ಶ್ರೀನಿವಾಸ್ ಪ್ರಚಾರ ಸಮಿತಿ ಅಧ್ಯಕ್ಷರಾದ ಕೃಷ್ಣ ಮೂರ್ತಿ ವಿ.ಕೆ ಗುಡ್ಡ ಮಹಾಲಿಂಗಪ್ಪ, ನರಸಿಂಹಮೂರ್ತಿ ಉಪಸ್ಥಿತರಿದ್ದರು.

## ಬಾಬು ಜಗಜೀವನ್ ರಾಮ್ ಜಯಂತಿ

**ಹಿರಿಯೂರು:** ಡಾಕ್ಟರ್ ಬಾಬು ಜಗಜೀವನ್ ರಾಮ್ ರವರ 117ನೇ ಜಯಂತಿಯನ್ನು ತಾಲೂಕು ಕಚೇರಿ ಸಭಾಂಗಣದಲ್ಲಿ ಪುಷ್ಪಾರ್ಚನೆ ಮಾಡುವ ಮೂಲಕ ಸರಳವಾಗಿ ಆಚರಿಸಲಾಯಿತು. ತಹಸೀಲ್ದಾರ್ ಅವರು ಶುಭಾಶಯವನ್ನು ಕೋರಿದರು. ಈ ಸಂದರ್ಭದಲ್ಲಿ ರಾಜೇಶ್ ಕುಮಾರ್ ತಹಸೀಲ್ದಾರ್ , ಸತೀಶ್ ಇ ಓ, ದಿನೇಶ್ ಸಹಾಯಕ ನಿರ್ದೇಶಕರು ಸ ಕ ಇ.,ಶ್ರೀನಿವಾಸ್ ಜಾದವ ನಗರಸಭೆ ಆಯುಕ್ತರು, ಮಹೇಶ್ ರೆಡ್ಡಿ ಅಕ್ಷರ ದಾಸೋಹ,ಮಂಜುನಾಥ್ ನಗರ ಠಾಣೆ ಇನ್ಸ್ಪೆಕ್ಟರ್, ಡಿ ಧರಣೇಂದ್ರಯ್ಯ ಪ್ರಾಚಾರ್ಯರು, ರಾಘವೇಂದ್ರ ಸಿಡಿಪಿಓ,ಮುಖಂಡರಾದ ಜಿ ಎಲ್ ಮೂರ್ತಿ, ರಾಘವೇಂದ್ರ, ಮಾರುತೇಶ್ ಕೊನಿಕೆರೆ ಇತರೆ ಮುಖಂಡರು ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು ಹಾಜರಿದ್ದರು.



**ಪ್ರಮುಖ ಸುದ್ದಿ**

# ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಜಗಜೀವನರಾಂ ದಿನಾಚರಣೆ

» ಚಿತ್ರದುರ್ಗ




ಬಾಬು ಜಗಜೀವನ ರಾಂ ರವರು ತಾವು ವಹಿಸಿಕೊಂಡಿದ್ದ ವಿವಿಧ ಖಾತೆಗಳಿಗೆ ನ್ಯಾಯವನ್ನು ಒದಗಿಸುವ ಕಾರ್ಯವನ್ನು ಮಾಡುವುದರ ಮೂಲಕ ದೇಶ ಮತ್ತು ಜನತೆಗೆ ಉತ್ತಮವಾದ ಕಾರ್ಯವನ್ನು ಮಾಡಿದ್ದಾರೆ ಎಂದು ಮಾಜಿ ಸಂಸದ ಬಿ.ಎನ್.ಚಂದ್ರಪ್ಪ ತಿಳಿಸಿದರು.

ಚಿತ್ರದುರ್ಗ ನಗರದ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಇಂದು ನಡೆದ ಬಾಬು ಜಗಜೀವನರಾಂರವರ 117 ಜನ್ಮ ದಿನಾಚರಣೆ ಕಾರ್ಯಕ್ರಮದಲ್ಲಿ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿದ ಅವರು, ಜಗಜೀವನರಾಂ ರವರು ರಕ್ಷಣಾ ಮಂತ್ರಿಯಾಗಿದ್ದಾಗ ದೇಶವನ್ನು ರಕ್ಷಣೆ ಮಾಡುವ ವಿವಿಧ ಕಾರ್ಯಕ್ರಮಗಳಿಗೆ ಚಾಲನೆಯನ್ನು ನೀಡಿ ದೇಶವನ್ನು ರಕ್ಷಣೆ ಮಾಡಿದ್ದಾರೆ. ದೇಶಕ್ಕೆ ಭದ್ರತೆಯನ್ನು ನೀಡಿದ್ದಾರೆ. ಹೆಸರನ್ನು ತಂದಿದ್ದಾರೆ. ಕಾರ್ಮಿಕ ಸಚಿವರಾಗಿದ್ದಾಗ ದೇಶದ ಬಡವರಿಗೆ ನ್ಯಾಯವನ್ನು ನೀಡುವುದರ ಮೂಲಕ ಇದೆ ರೀತಿ ಕೃಷಿ ಸಚಿವರಾಗಿ ಹಸಿರು ಕ್ರಾಂತಿಯನ್ನು ಮಾಡುವುದರ ಮೂಲಕ ದೇಶದ ಆಹಾರ ಸಮಸ್ಯೆಯನ್ನು ನೀಗಿಸುವಲ್ಲಿ ಪ್ರಮುಖವಾದ ಪಾತ್ರವನ್ನು ವಹಿಸಿದ್ದರು. ಇದರೊಂದಿಗೆ ದೇಶ ಆಹಾರದ ಕೊರತೆಯನ್ನು ಎದುರಿಸುತ್ತಿದ್ದಾಗ ಬೇರೆ ದೇಶದಿಂದ ಆಹಾರ ಸಾಮಾಗ್ರಿಗಳನ್ನು ತರಿಸುವುದರ ಮೂಲಕ ಜನತೆಗೆ ಹಸಿವನ್ನು ನೀಗಿಸಿದ್ದಾರೆ ಎಂದರು.

ಶೋಷಿತ ವರ್ಗದಿಂದ ಬಂದ ವ್ಯಕ್ತಿ ಈ ದೇಶದಉಪಪ್ರಧಾನಿಯಾಗುವುದರಮಟ್ಟಕ್ಕೆ ಹೋಗುವುದರ ಬೆಳವಣಿಗೆಯಾಗಿದ್ದನ್ನು ಶೋಷಿತ ವರ್ಗ ಇಂದು ನೆನೆಯುತ್ತಿದೆ. ಆಡು ಮುಟ್ಟದ ಸೊಪ್ಪಿಲ್ಲ ಎನ್ನುವ ರೀತಿಯಲ್ಲಿ ಬಾಬು ಜಗಜೀವನರಾಂರವರು ತಮಗೆ ವಹಿಸಿಕೊಟ್ಟ ಖಾತೆಗಳನ್ನು ಜವಾಬ್ದಾರಿಯಿಂದ ನಿರ್ವಹಿಸುವುದರ ಮೂಲಕ ಹೆಸರನ್ನು ಮಾಡಿದ್ದಾರೆ. ಪ್ರಮಾಣಿಕತೆ ಮತ್ತು ಜ್ಞಾನಾರ್ಜನೆಯಿಂದ ದೇಶಕ್ಕೆ ಮಾದರಿಯಾಗಿದ್ದ ನಾಯಕರಾಗಿದ್ದಾರೆ.

ಬರಗಾಲದ ಸಮಯದಲ್ಲಿ ಕೆಂಪು ಜೋಳ, ಗೋಧಿಯನ್ನು ತರಿಸುವುದರ ಮೂಲಕ ಬಡವರಿಗೆ ನೀಡಿದರು, ಜೈ ಜವಾನ್ ಜೈ ಕಿಸಾನ್ ಎಂದು ಹೇಳುವುದರ ಮೂಲಕ ರೈತರ ಬಗ್ಗೆ ಕಾಳಜಿಯನ್ನು ವಹಿಸಿದ್ದರು ಇವರ ಸ್ಮರಣೆ ಆಗತ್ಯವಾಗಿದೆ ಎಂದರು.

ಗ್ಯಾರೆಂಟಿ ಯೋಜನೆಗಳ ಸಮಿತಿಯ ಅಧ್ಯಕ್ಷರಾದ ಶಿವಣ್ಣ ಮಾತನಾಡಿ, ಬಾಬು ಜಗಜೀವನರಾಂ ರವರು ತಮ್ಮ ಜೀವಿತಾವಧಿಯಲ್ಲಿ ಹಲವಾರು ಸಾಧನೆಯನ್ನು ಮಾಡಿದ್ದಾರೆ, ಅಲ್ಲದೆ ಅವರಿಗೆ ಸರ್ಕಾರದಲ್ಲಿ ಕೊಟ್ಟಂತಹ ಖಾತೆಗಳಿಗೆ ನ್ಯಾಯವನ್ನು ಒದಗಿಸಿದ್ದಾರೆ. ದಲಿತ ಕುಟುಂಬದಲ್ಲಿ ಹುಟ್ಟಿದ ಅವರು ದಲಿತರಿಗೆ ಹಲವಾರು ರೀತಿಯ ಕೊಡುಗೆಯನ್ನು ನೀಡಿದ್ದಾರೆ. ಅವರ ಜಯಂತಿಯನ್ನು ಆಚರಣೆ ಮಾಡುವುದು ಮಾತ್ರವಲ್ಲ ಅವರ ತತ್ವ ಆದರ್ಶಗಳನ್ನು ನಾವುಗಳು ಪಾಲಿಸಬೇಕಿದೆ ಎಂದರು.

ಕಾರ್ಯಕ್ರಮದಲ್ಲಿ ನಗರಾಭೀವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷರಾದ ಬಿ.ಟಿ.ಜಗದೀಶ್, ಲೋಕೇಶ್ ನಾಯ್ಕ್ ಸೇರಿದಂತೆ ಇತರರು ಮಾತನಾಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಸಂಪತ್ ಕುಮಾರ್, ಪರಿಶಿಷ್ಟ ಜಾತಿ ವಿಭಾಗದ ಅಧ್ಯಕ್ಷರಾದ ಜಯ್ಯಣ್ಣ, ಟಿ. ಮಲ್ಲೇಶ್, ಅಂಜನಪ್ಪ ಸ್ವಾಮಿ, ನರಹರಿ, ನಾಗರಾಜ್, ಮಲ್ಲೇಶ್, ಶಬ್ಬಿರ್, ಕಿರಣ, ಪ್ರಕಾಶ ರಾಮನಾಯ್ಕ್, ವಾಸಿಂ, ಆಶೋಕ್, ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ನಮ್ಮಲ್ಲಿ ಯಾವುದೇ ಭಿನ್ನಮತ ಇಲ್ಲ; ಚಂದ್ರಪ್ಪ ಸ್ಪಷ್ಟನೆ

» ಚಿತ್ರದುರ್ಗ

ಪಕ್ಷದಲ್ಲಿ ಯಾವುದೇ ರೀತಿಯ ಭಿನ್ನಮತ ಇಲ್ಲ ಚುನಾವಣೆಯಲ್ಲಿ ಚೆನ್ನಾಗಿ ಕೆಲಸವನ್ನು ಮಾಡಿ ಕಾಂಗ್ರೆಸ್ ಅಭ್ಯರ್ಥಿಯನ್ನು ಗೆಲ್ಲಿಸುವಂತೆ ಮುಖ್ಯಮಂತ್ರಿಗಳು ಸೂಚನೆ ನೀಡಿದ್ದಾರೆ ಹೊರೆತು ನಮ್ಮಲ್ಲಿ ಯಾವುದೇ ಭಿನ್ನಮತ ಇಲ್ಲ ಎಂದು ಮಾಜಿ ಸಂಸದ ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಬಿ.ಎನ್,. ಚಂದ್ರಪ್ಪ ತಿಳಿಸಿದರು. ಚಿತ್ರದುರ್ಗದ ಕಾಂಗ್ರೆಸ್ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಖ್ಯಮಂತ್ರಿಗಳು ಚಿತ್ರದುರ್ಗಕ್ಕೆ ಭೇಟಿ ಮಾಡಿದಾಗ ವೇದಿಕೆಯಲ್ಲಿ ಪಕ್ಷದ ಮುಖಂಡರಿಗೆ ಚುನಾವಣೆಯ ಬಗ್ಗೆ ಹಲವಾರು ಸೂಚನೆಯನ್ನು ನೀಡಿದ್ದಾರೆ. ಇದನ್ನು ಪಕ್ಷದಲ್ಲಿ ಭಿನ್ನಮತ ಎನ್ನುವುದು ಸರಿಯಲ್ಲ. ಕಾಂಗ್ರೆಸ್‌ನಲ್ಲಿ ಬಿನ್ನಾಭಿಪ್ರಾಯದ ಪ್ರಶ್ನೆ ಇಲ್ಲ. ಮುಖ್ಯಮಂತ್ರಿಗಳು ಚಿತ್ರದುರ್ಗಕ್ಕೆ ಭೇಟಿ ನೀಡುವುದರ ಮೂಲಕ ಶಾಸಕರನ್ನು ಹುರಿದುಂಬಿಸುವ ಕಾರ್ಯವನ್ನು ಮಾಡಿದ್ದಾರೆ. ಈಗ ವ್ಯವಸ್ಥಿತವಾಗಿ ಚುನಾವಣಾ ಪ್ರಚಾರ ಕಾರ್ಯ ಆರಂಭವಾಗಲಿದೆ ಎಂದರು. ಕಳೆದ ಚುನಾವಣೆಯಲ್ಲಿ ಬಿಜೆಪಿಯವರು ದೇಶದ ಪ್ರತಿಯೊಬ್ಬ ಆಕೌಂಟಿಗೆ 15 ಲಕ್ಷ ರೂ.ಗಳನ್ನು ಹಾಕುತ್ತೇವೆ ಇದರೊಂದಿಗೆ ಪ್ರತಿ ವರ್ಷ 2 ಲಕ್ಷ ಉದ್ಯೋಗವನ್ನು ನೀಡುತ್ತೇವೆ ಎಂದಿದ್ದರು ಇದರ ಬಗ್ಗೆ ಮುಖ್ಯಮಂತ್ರಿಗಳು ಅಂಕಿ ಅಂಶಗಳನ್ನು ತಿಳಿಸಿದ್ದಾರೆ. ರಾಜ್ಯಕ್ಕೆ ಕೇಂದ್ರದಿಂದ ಯಾವುದೇ ರೀತಿಯ ಪರಿಹಾರ ಬಂದಿಲ್ಲ ರಾಜ್ಯದಿಂದ 100 ರೂ ಹೋದರೆ ಅದರಲ್ಲಿ 12 ರೂಗಳನ್ನು ಮಾತ್ರ ನೀಡಲಾಗುತ್ತಿದೆ ಇಷ್ಟೊಂದು ಮಲ ತಾಯಿ ಧೋರಣೇಯನ್ನು ಮಾಡಲಾಗುತ್ತಿದೆ. ಇದರ ಬಗ್ಗೆ ಬಿಜೆಪಿ ಅಭ್ಯರ್ಥಿಗಳಾಗಲಿ, ಮುಖಂಡರಾಗಲಿ ಉತ್ತರವನ್ನು ನೀಡಲಿ ಎಂದರು. ಚಿತ್ರದುರ್ಗ ನನ್ನ ಧರ್ಮಪತ್ನಿಯ ಊರಾಗಿದೆ. ಇಲ್ಲಿ ಅವರ ತಂದೆ-ತಾಯಿಯವರು ಇದೇ ಊರಿನವರು ಇದನ್ನು ನಾನು ರಾಜಕೀಯಕ್ಕೆ ಬಳಸಿಕೊಳ್ಳುವುದಿಲ್ಲ. ನಾವು ಯಾರನ್ನು ಟೀಕೆ ಮಾಡುವುದಿಲ್ಲ. ನಮ್ಮ ಗೆಲುವನ್ನು ಜನ ತೀರ್ಮಾನ ಮಾಡುತ್ತಾರೆ. ಚಿತ್ರದುರ್ಗ ಜಿಲ್ಲೆಗೆ ಚಂದ್ರಪ್ಪ ರವರ ಸಂಬಂಧ ಏನು ಬೇರೆಯವರ ಸಂಬಂಧ ಏನು ಎಂದು ಮತದಾರರು ನಿರ್ಧಾರ ಮಾಡುತ್ತಾರೆ ಎಂದು ಚಂದ್ರಪ್ಪ ನುಡಿದರು.

### 7 ರಂದು ಉಪವಾಸ ಸತ್ಯಾಗ್ರಹ

» ಚಿತ್ರದುರ್ಗ

ಆಮ್ ಆದ್ಮಿ ಪಕ್ಷದ ಮುಖ್ಯಸ್ಥರಾದ ಅರವಿಂದ ಕ್ರೇಜಿವಾಲ್ ರವರನ್ನು ಬಂಧಿಸಿದ ಹಿನ್ನಲೆಯಲ್ಲಿ ಏ.7 ರಂದು ಆಮ್ ಆದ್ಮಿ ಪಾರ್ಟಿ ಚಿತ್ರದುರ್ಗ ಘಟಕದವತಿಯಿಂದಒಂದುದಿನದಉಪವಾಸವನ್ನು ಹಮ್ಮಿಕೊಂಡಿರುವುದಾಗಿ ಜಿಲ್ಲಾಧ್ಯಕ್ಷರಾದ ಬಿ.ಜಗದೀಶ್ ತಿಳಿಸಿದ್ದಾರೆ. ಈ ಬಗ್ಗೆ ಹೇಳಿಕೆಯನ್ನು ನೀಡಿರುವ ಅವರು, ದೆಹಲಿ ಮುಖ್ಯಮಂತ್ರಿಗಳಾದ ಅರವಿಂದ ಕ್ರೇಜಿವಾಲ್ ರವರು ಬಂಧಿಸಿರುವುದನ್ನು ವಿರೋಧಿಸಿ ಏ.7 ರಂದು ನಗರದ ಜಿಲ್ಲಾಧಿಕಾರಿಗಳ ಕಚೇರಿ ಮುಂಭಾಗದಲ್ಲಿ ಪಕ್ಷದ ಮುಖಂಡರು, ಕಾರ್ಯಕರ್ತರಿಂದ ಒಂದು ದಿನದ ಉಪವಾಸ ಸಾಂಕೇತಿಕ ಸತ್ಯಾಗ್ರಹವನ್ನು ಬೆಳಿಗ್ಗೆ 10 ರಿಂದ ಸಂಜೆ 5.30ರವರೆಗೆ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.

### ಮಾಜಿ ದೇವದಾಸಿಯರಿಂದ ಮತದಾನ ಜಾಗೃತಿ

» ದಾವಣಗೆರೆ

ಸಾರ್ವತ್ರಿಕ ಲೋಕಸಭಾ ಚುನಾವಣೆ-2024 ರ ಪ್ರಯುಕ್ತ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಮತ್ತು ಮಹಾನಗರಪಾಲಿಕೆ , ಇವರ ಸಹಯೋಗದಲ್ಲಿ ಏಪ್ರಿಲ್ 6 ರಂದು ಸಂಜೆ 4.30ಕ್ಕೆ ಜಿಲ್ಲಾಡಳಿತ ಕಚೇರಿ ಆವರಣದಲ್ಲಿ ಮಾಜಿ ದೇವದಾಸಿ ಮಹಿಳೆಯರಿಂದ ರಂಗೋಲಿ ಬಿಡಿಸುವ ಮೂಲಕ ಹಾಗೂ ಪಿ.ಬಿ.ರೋಡ್ ವೃತ್ತದಲ್ಲಿ ಮಾನವ ಸರಪಳಿ ಆಯೋಜಿಸುವ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.



ಚಳ್ಳಕೆರೆ ನಗರದ ಬಾಬು ಜಗಜೀವನರಾಮ್ ವೃತ್ತದಲ್ಲಿ ಹಸಿರು ಕ್ರಾಂತಿಹರಿಕಾರ ಬಾಬು ಜಗಜೀವನರಾಮ್‌ರವರ 117ನೇ ಜನ್ಮದಿನಾಚರಣೆಯನ್ನು ಕರ್ನಾಟಕ ದಲಿತ ಸಂಘರ್ಷ ಸಮಿತಿ, ದಲಿತ ಸಂಘಟನೆಗಳ ಮಹಾಒಕ್ಕೂಟವತಿಯಿಂದ ಆಚರಿಸಿದರು. ಉಮೇಶ್‌ಚಂದ್ರಬ್ಯಾನರ್ಜಿ, ಪಾಪಣ್ಣ, ರವಿಕುಮಾರ್, ಪೆನ್ನೇಶ್, ಮುತ್ತುರಾಜ್ ಇದ್ದರು.

ಶೇ 85 ಕ್ಕಿಂತ ಹೆಚ್ಚು ಮತದಾನವಾಗುವಂತೆ ಟಾರ್ಗೆಟ್ ನೀಡಿದ ಸಿಇಓ

# ದಾವಣಗೆರೆ ಉತ್ತರ, ದಕ್ಷಿಣದಲ್ಲಿ ಕಡಿಮೆ ಮತದಾನ

» ದಾವಣಗೆರೆ

ಲೋಕಸಭೆಗೆ ಸಾರ್ವತ್ರಿಕ ಚುನಾವಣೆ ನಡೆಯುತ್ತಿದ್ದು ದಾವಣಗೆರೆ ಉತ್ತರ ಮತ್ತು ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ 2019 ರ ಲೋಕಸಭಾ ಚುನಾವಣೆಯಲ್ಲಿ ಕ್ಷೇತ್ರದ ಸರಾಸರಿಗಿಂತ ಕಡಿಮೆ ಮತದಾನವಾಗಿದ್ದು ಈಭಾರಿಯಲೋಕಸಭಾಚುನಾವಣೆಯಲ್ಲಿ ಶೇ 85 ಕ್ಕಿಂತ ಹೆಚ್ಚು ಮತದಾನವಾಗುವಂತೆ ನೋಡಿಕೊಳ್ಳಬೇಕೆಂದು ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಸ್ವೀಪ್ ಸಮಿತಿ ಅಧ್ಯಕ್ಷರಾದ ಸುರೇಶ್ ಬಿ.ಇಟ್ನಾಳ್ ತಿಳಿಸಿದರು.

ಅವರು ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ದಾವಣಗೆರೆ ಉತ್ತರ, ದಕ್ಷಿಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಮತಗಟ್ಟೆ ಅಧಿಕಾರಿಗಳೊಂದಿಗೆ ನಡೆಸಿದ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಕಳೆದ 2019 ರಲ್ಲಿ ನಡೆದ ಲೋಕಸಭಾ ಚುನಾವಣೆಯಲ್ಲಿ ದಾವಣಗೆರೆ ಕ್ಷೇತ್ರದಲ್ಲಿ ಶೇ 72.96 ರಷ್ಟು ಮತದಾನವಾಗಿತ್ತು. ಆದರೆ ಅತ್ಯಂತ ಕಡಿಮೆ ಮತದಾನವಾಗಿದ್ದು ದಾವಣಗೆರೆ ಉತ್ತರ ಶೇ 65.71, ದಕ್ಷಿಣ ಶೇ 65.93 ರಷ್ಟು ಮತದಾನವಾಗಿದೆ. ಇದು ಈ ಚುನಾವಣೆಯಲ್ಲಿ ಶೇ 85 ಕ್ಕಿಂತಲೂ ಹೆಚ್ಚು ಮತದಾನವಾಗಬೇಕೆಂಬುದು ಕ್ಷೇತ್ರದ ಗುರಿಯಾಗಿದೆ ಎಂದರು.

ದಾವಣಗೆರೆ ಉತ್ತರದಲ್ಲಿ 245 ಹಾಗೂ ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ 217 ಮತಗಟ್ಟೆಗಳಿವೆ. 2019 ರ ಚುನಾವಣೆಯ ಸರಾಸರಿ ಮತದಾನಕ್ಕಿಂತಲೂ ಶೇ 20 ರಷ್ಟು ಕಡಿಮೆ 9 ಮತಗಟ್ಟೆ, ಶೇ 15 ರಷ್ಟು ಕಡಿಮೆ 40 ಮತಗಟ್ಟೆ, ಶೇ 10 ರಷ್ಟು ಕಡಿಮೆ 135 ಮತಗಟ್ಟೆಗಳಲ್ಲಿ ಮತದಾನವಾಗಿದೆ. ಇವು ಜಿಲ್ಲೆಯ ಎಲ್ಲಾ ಮತಗಟ್ಟೆಗಳಿಗಿಂತ ಕಡಿಮೆ ಮತದಾನವಾದ ಕ್ಷೇತ್ರಗಳಾಗಿವೆ.

ಈ ಕ್ಷೇತ್ರಗಳಲ್ಲಿ 2024 ರ ಚುನಾವಣೆಯಲ್ಲಿ ಹೆಚ್ಚು ಮತದಾನ ಮಾಡಿದಲ್ಲಿ ಶೇ 85 ಕ್ಕಿಂತ ಹೆಚ್ಚು ಮತದಾನವಾಗಲು ಸಾಧ್ಯವಿದೆ. ಎಲ್ಲಾ ಮತಗಟ್ಟೆ ಅಧಿಕಾರಿಗಳು ಮನೆ ಮನೆಗೆ ಭೇಟಿ ನೀಡಿ ಮತದಾರರ ಮಾಹಿತಿಯನ್ನು ಸಂಗ್ರಹಿಸಿ ಚುನಾವಣೆ ನಡೆಯುವ ಮೇ 7 ರಂದು ತಪ್ಪದೇ ಮತಗಟ್ಟೆಗೆ ಬಂದು ಮತದಾನ ಮಾಡಲು ತಿಳಿಸುವ ಕೆಲಸವನ್ನು ಮತಗಟ್ಟೆ ಅಧಿಕಾರಿಗಳು ಮಾಡಬೇಕಾಗಿದೆ ಎಂದರು.

ಶೇ 10 ರಿಂದ 30 ರಷ್ಟು ಮತದಾರರ ಸಂಪರ್ಕವಿಲ್ಲ; ದಾವಣಗೆರೆ ಉತ್ತರ ಕ್ಷೇತ್ರದಲ್ಲಿ ಕಡಿಮೆ ಮತದಾನ ಮಾಡಲಾದ 22 ಮತಗಟ್ಟೆಗಳು ಹಾಗೂ ದಾವಣಗೆರೆ ದಕ್ಷಿಣ ಕ್ಷೇತ್ರದಲ್ಲಿ ಕಡಿಮೆ ಮತದಾನವಾದ 21 ಮತಗಟ್ಟೆಗಳ ಅಧಿಕಾರಿಗಳೊಂದಿಗೆ ಪರಿಶೀಲನೆ ನಡೆಸಿದಾಗ ಶೇ 10 ರಿಂದ 30 ರಷ್ಟು ಮತದಾರರ ಸಂಪರ್ಕ ಸಿಕ್ಕಿಲ್ಲ ಎಂಬ ಮಾಹಿತಿಯನ್ನು ಮತಗಟ್ಟೆ ಅಧಿಕಾರಿಗಳು ಅಂಕಿ ಅಂಶದೊಂದಿಗೆ ತಿಳಿಸಿದರು. ಕೆಲವು ಮತಗಟ್ಟೆ ಅಧಿಕಾರಿಗಳು ಮನೆ ಮನೆಗೆ ಭೇಟಿ ನೀಡಿ ಕರಾರುವಕ್ಕಾಗಿ ಸಮೀಕ್ಷೆ ನಡೆಸಿ ಬೇರೆ ಕಡೆ ವರ್ಗಾವಣೆ, ಮರಣ ಹೊಂದಿದವರ ವಿವರ ಸಂಗ್ರಹಿಸಿರುವರು ಎಂಬ ಮಾಹಿತಿ ನೀಡಿದರು.

'ಗಟ್ಟೆ ಅಧಿಕಾರಿಗಳು ಮತದಾರರ ಪಟ್ಟಿಯಲ್ಲಿ ಹೆಸರಿದ್ದು ಅವರ ವಿವರ ಸಿಕ್ಕಿರುವುದಿಲ್ಲ, ಕೆಲವರು ಬಾಡಿಗೆದಾರರಾಗಿದ್ದು ಬೇರೆ ಕಡೆ ವಾಸವಾಗಿದ್ದಾರೆ. ಇನ್ನೂ ಕೆಲವು ಕಡೆ ಒಂದೇ ವಾರ್ಡ್ ವಾಸಿಯಾಗಿದ್ದರೂ ಅಕ್ಕಪಕ್ಕದ ಮತಗಟ್ಟೆಯಲ್ಲಿ ಹಂಚಿಕೆಯಾಗಿದೆ. ಪಿಎನ್‌ಟಿ ಕ್ವಾರ್ಟಸ್, ಕೆಎಸ್‌ಆರ್‌ಟಿಸಿ ವಸತಿಗೃಹ ಸೇರಿದಂತೆ ಅನೇಕ ವಸತಿಗೃಹದಲ್ಲಿ ವಾಸವಿದ್ದವರ ಹೆಸರಿದೆ, ಆದರೆ ಅವರು ಇಲ್ಲಿರುವುದಿಲ್ಲ ಎಂಬ ಮಾಹಿತಿಯನ್ನು ಮತಗಟ್ಟೆ ಅಧಿಕಾರಿಗಳು ನೀಡಿದರು.

ಕಡಿಮೆ ಮತದಾನ ಮಾಡಿದ ಮತಗಟ್ಟೆಗಳಲ್ಲಿ ಮತದಾನ ಮಾಡದೇ ಉಳಿಯಲು ಕಾರಣವೇನು. ಅವರನ್ನು ಸಂಪರ್ಕಿಸಲಾಗಿದಿಯೇ, ಎಲ್ಲಿ ವಾಸಿಸುವರು, ಎಷ್ಟು ವರ್ಷದಿಂದ ಇಲ್ಲಿ ವಾಸಿಸುತ್ತಿಲ್ಲ ಎಂಬ ಮಾಹಿತಿಯನ್ನು ಕೆಲವು ಮತಗಟ್ಟೆ ಅಧಿಕಾರಿಗಳು ಸರಿಯಾಗಿ ನೀಡದಿದ್ದಾಗ ನೀವು ಸರಿಯಾಗಿ ಹೋಂ ವರ್ಕ್ ಮಾಡಿರುವುದಿಲ್ಲ ಎಂದು ಸಿಇಓ ಸೂಚನೆ ನೀಡಿ ನಿಮ್ಮ ವ್ಯಾಪ್ತಿಯಲ್ಲಿ ಮನೆ ಮನೆ ಭೇಟಿ ನೀಡಿ, ಅಲ್ಲಿನ ಸ್ಥಳೀಯ ನಿವಾಸಿಗಳು, ಬಾಡಿಗೆದಾರರಾಗಿದ್ದಲ್ಲಿ ಮಾಲಿಕರ ಬಳಿ ಅವರ ಕರಾರು ಪತ್ರಗಳ ಪ್ರತಿಗಳಿರುತ್ತದೆ. ಈ ಎಲ್ಲಾ ಮಾಹಿತಿ ಸಂಗ್ರಹಿಸಿದಲ್ಲಿ ಅನ್ಯ ಸ್ಥಳದ ಮತದಾರರ ವಿವರ ಲಭ್ಯವಾಗುತ್ತದೆ. ಆದರೆ ಕೆಲಸದಲ್ಲಿ ನಿರ್ಲಕ್ಷ್ಯತೆ ಇದ್ದಲ್ಲಿ ಮಾಹಿತಿ ಸಂಗ್ರಹಿಸಲು ಸಾಧ್ಯವಾಗುವುದಿಲ್ಲ. ಇನ್ನೊಂದು ಭಾರಿ ಸಭೆ ಕರೆದು ಪರಿಶೀಲನೆ ನಡೆಸಲಾಗುತ್ತದೆ, ಆ ನಂತರವೂ ಕ್ಷೇತ್ರದಲ್ಲಿ ಸರಿಯಾಗಿ ಕೆಲಸ ಮಾಡಿದಿದ್ದಲ್ಲಿ ಕರ್ತವ್ಯ ನಿರ್ಲಕ್ಷ್ಯತೆ ತೋರುವ ಬಿ.ಎಲ್.ಓ.ಗಳ ಮೇಲೆ ಕ್ರಮ ಅನಿವಾರ್ಯವಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಮತಗಟ್ಟೆ ಅಧಿಕಾರಿಗಳು ಸಂಪರ್ಕಕ್ಕೆ ಸಿಗದಿರುವ ಮತದಾರರ ಬಗ್ಗೆ ಅವರ ಸಂಪರ್ಕಸಾಧಿಸುವ ಮೂಲಕ ಮತದಾನ ಮಾಡಲು ತಿಳಿಸಲಾಗುತ್ತದೆ. ವಸತಿಗೃಹಗಳಲ್ಲಿ ವಾಸಿಸುತ್ತಿದ್ದ ಮತದಾರರಾಗಿದ್ದಲ್ಲಿ ಅಂತಹ ಇಲಾಖೆಗಳ ಮುಖ್ಯಸ್ಥರ ಗಮನಕ್ಕೆ ತಂದು ಅವರ ಸಂಪರ್ಕ ಸಾಧಿಸಲಾಗುತ್ತದೆ. ಮತ್ತು ಈ ಭಾರಿಯ ಚುನಾವಣೆಯಲ್ಲಿ ಅಗತ್ಯ ಸೇವಾ ಇಲಾಖೆ ಅಧಿಕಾರಿಗಳು ಹಾಗೂ ಸಿಬ್ಬಂದಿಗಳಿಗೆ ಅವರು ಕರ್ತವ್ಯ ನಿರ್ವಹಿಸುತ್ತಿರುವ ಜಿಲ್ಲಾ ಕೇಂದ್ರದಿಂದ ಮತದಾನಕ್ಕೆ ಅವಕಾಶ ಮಾಡಿದ್ದು ಅವರಿಗೆ 12ಡಿ ಕೊಡಿಸಲು ಕ್ರಮ ಕೈಗೊಳ್ಳಲಾಗುತ್ತದೆ ಎಂದರು. ಪಾಲಿಕೆ ಆಯುಕ್ತರಾದ ರೇಣುಕಾ ಮಾತನಾಡಿ ಪಾಲಿಕೆ ವ್ಯಾಪ್ತಿಯಲ್ಲಿ ಎಲ್ಲಾ ಮತದಾರರಿಗೂ ಮತಚೀಟಿ, ಮಾರ್ಗದರ್ಶಿ, ಸಂಕಲ್ಪ ಪತ್ರವನ್ನು ಎಲ್ಲಾ ಮತದಾರರಿಗೂ ತಲುಪಿಸುವ ಕೆಲಸ ಮಾಡಲಾಗುತ್ತದೆ. ಈ ಕೆಲಸಕ್ಕಾಗಿ ಎಲ್ಲಾ ಬಿಎಲ್‌ಓ ಗಳ ಜೊತೆಗೆ ಪಾಲಿಕೆ ನೀರುಗಂಟಿ, ಆರೋಗ್ಯ ನಿರೀಕ್ಷಕರು, ಕಂದಾಯ ನಿರೀಕ್ಷಕರು ಸೇರಿದಂತೆ ಎಲ್ಲಾ ಬಿಲ್ ಕಲೆಕ್ಟರ್‌ಗಳನ್ನು ಮತಗಟ್ಟೆ ಅಧಿಕಾರಿಗಳೊಂದಿಗೆ ನೇಮಿಸಲಾಗುತ್ತದೆ. ಕೆಲವು ಕಡೆ ಬಿಎಲ್‌ಓಗಳು ಸರಿಯಾಗಿ ಕೆಲಸ ಮಾಡದಿರುವುದು ಕಂಡು ಬಂದಿದ್ದು ಅವರ ಕಾರ್ಯವನ್ನು ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುತ್ತದೆ ಎಂದರು.

ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಮಲ್ಲಾನಾಯ್ಕ್ ಹಾಗೂ ಬಿಎಲ್‌ಓಗಳು ಮತ್ತು ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.



### ಮತಗಟ್ಟೆ ಅಧಿಕಾರಿಗಳಿಗೆ ನೋಟಿಸ್

ಮತಗಟ್ಟೆ ಅಧಿಕಾರಿಗಳು ಕೆಲವು ಕಡೆ ಅತ್ಯುತ್ತಮವಾಗಿ ಕೆಲಸ ಮಾಡಿರುವರು. ಮತ್ತು ಇನ್ನು ಕೆಲವರು ಕರ್ತವ್ಯ ನಿರ್ಲಕ್ಷ್ಯತೆಯನ್ನು ತೋರುತ್ತಿದ್ದಾರೆ. ಸಭೆ ಕರೆದಿದ್ದರೂ ಸರಿಯಾದ ಮಾಹಿತಿ ನೀಡಲು ಸಾಧ್ಯವಾಗುವುದಿಲ್ಲ ಎಂದು ಗೈರು ಹಾಜರಾಗಿದ್ದಾರೆ, ಅಂತಹ ಬಿ.ಎಲ್.ಓ.ಗಳಿಗೆ ನೋಟಿಸ್ ನೀಡಲು ತಿಳಿಸಿ ಮತಗಟ್ಟೆ ಅಧಿಕಾರಿಗಳಾಗಿ ಬಹುತೇಕ ಶಿಕ್ಷಕರಿದ್ದು ಮುಂದಿನ ಸಭೆಗೆ ಕ್ಷೇತ್ರ ಶಿಕ್ಷಣಾಧಿಕಾರಿ ಹಾಗೂ ಉಪನಿರ್ದೇಶಕರನ್ನು ಸಭೆಗೆ ಆಹ್ವಾನಿಸಲಾಗುತ್ತದೆ. ಬಿ.ಎಲ್.ಓ ಕೆಲಸ ಮಾಡುತ್ತಿರುವುದರಿಂದ ನಮಗೆ ಸಕಾಲದಲ್ಲಿ ಗಳಿಕೆ ರಜೆ ನೀಡಬೇಕಾಗಿದ್ದು ನೀಡಿಲ್ಲ ಎಂದಾಗ ಇದನ್ನು ಶಿಕ್ಷಣ ಇಲಾಖೆ ಆಯುಕ್ತರು ಮತ್ತು ಚುನಾವಣಾಧಿಕಾರಿಗಳ ಗಮನಕ್ಕೆ ತರಲಾಗುತ್ತದೆ ಎಂದು ತಿಳಿಸಿದರು.

### ಅಧಿಕಾರಿಗಳಿಗೆ ಮತದಾನ ಹೆಚ್ಚಳಕ್ಕೆ ಗುರಿ

ಮತದಾನ ಜಾಗೃತಿ ಕಾರ್ಯಕ್ರಮದ ಜೊತೆಗೆ ಎಲ್ಲಾ ಮತಗಟ್ಟೆ ವ್ಯಾಪ್ತಿಯಲ್ಲಿ ಮತದಾರರನ್ನು ಸಂಪರ್ಕಿಸುವ ಕೆಲಸವಾಗಬೇಕಾಗಿದೆ. ಈ ಮೂಲಕ ಶೇ 85 ಕ್ಕಿಂತ ಹೆಚ್ಚು ಮತದಾನವಾಗುವಂತೆ ನೋಡಿಕೊಳ್ಳಬೇಕು. ಮತದಾರರಿಗೆ ಮತದಾರ ಚೀಟಿ, ವೋಟರ್ ಗೈಡ್, ಸಂಕಲ್ಪ ಪತ್ರ ತಲುಪಿಸುವ ಕೆಲಸ ಮಾಡಬೇಕು. ಈ ಭಾರಿಯ ಚುನಾವಣೆಯಲ್ಲಿ 3 ಮತ್ತು ಅದಕ್ಕಿಂತ ಹೆಚ್ಚು ಒಂದೇ ಸ್ಥಳದಲ್ಲಿ ಮತಗಟ್ಟೆ ಇರುವ ಕೇಂದ್ರಗಳಲ್ಲಿ ಮತದಾರರ ಸಹಾಯಮೇಜು ಸ್ಥಾಪಿಸಲಾಗುತ್ತದೆ ಹಾಗೂ ಸ್ವಯಂ ಸೇವಕರನ್ನು ನೇಮಕ ಮಾಡಲಾಗುತ್ತದೆ. ಮತ್ತು ಮತದಾರರ ಚೀಟಿಯಲ್ಲಿ ಕ್ಯೂಆರ್.ಕೋಡ್ ಸಹ ನೀಡಲಾಗುತ್ತಿದ್ದು ಆನ್ ಮಾಡಿಕೊಂಡಲ್ಲಿ ಮತಗಟ್ಟೆಗೆ ಹೋಗಬಹುದಾಗಿದೆ. ಆದರೂ ಸಹ ಇಂತಹ ಮತಗಟ್ಟೆಗಳಿಗೆ ಗೊಂದಲವಾಗದಂತೆ ಎಚ್ಚರ ವಹಿಸಲಾಗುತ್ತದೆ ಎಂದರು.

# ಪ್ರಜಾಪ್ರಭುತ್ವದ ಶಕ್ತಿ, ಮೇ.7 ರಂದು ಮತಗಟ್ಟೆಗೆ ಬನ್ನಿ

» ದಾವಣಗೆರೆ

ಜಿಲ್ಲೆಯಲ್ಲಿರುವ ಎಲ್ಲ ಮತದಾರರು ಮತದಾನ ಮಾಡುವುದರ ಮೂಲಕ ಪ್ರಜಾಪ್ರಭುತ್ವ ಶಕ್ತಿ, ಸಾಮರ್ಥ್ಯವನ್ನು ಹೆಚ್ಚಿಸಬೇಕೆಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಾ.ವೆಂಕಟೇಶ್.ಎಂ.ವಿ ಕರೆ ನೀಡಿದರು.

ನಗರದ ರೈಲ್ವೆ ನಿಲ್ದಾಣದ ಆವರಣದಲ್ಲಿ ಗುರುವಾರ ಸಮಾಜ ಕಲ್ಯಾಣ, ಪರಿಶಿಷ್ಟ ವರ್ಗಗಳ ಕಲ್ಯಾಣ, ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಆಯೋಜಿಸಲಾಗಿದ್ದ ವಿದ್ಯಾರ್ಥಿಗಳಿಂದ ರಂಗೋಲಿ ಬಿಡಿಸುವ ಮೂಲಕ ಮತದಾನ ಜಾಗೃತಿ ಕಾರ್ಯಕ್ರಮ ಉದ್ದೇಶಿಸಿ ಮಾತಾನಾಡಿದರು.ಜಿಲ್ಲೆಯಲ್ಲಿ 16 ಲಕ್ಷ ಮತದಾರರಿದ್ದಾರೆ, 1693 ಮತಗಟ್ಟೆಗಳಿವೆ. 18 ವರ್ಷ ತುಂಬಿದ ಎಲ್ಲಾ ಮತದಾರರು ಮತದಾನ ಮಾಡಬೇಕು ಮತ್ತು ಎಲ್ಲರೂ ಪ್ರಜಾಪ್ರಭುತ್ವವನ್ನು ಬೆಳೆಸಬೇಕು, ಪ್ರತಿಯೊಬ್ಬರ ಮತದಾನವೂ ಅತ್ಯಮೂಲ್ಯವಾದದ್ದು, ಮತದಾನದ ದಿನ ಎಲ್ಲ ಯುವಕ, ಯುವತಿಯರು ಇದೇ ಉತ್ಸಾಹದಲ್ಲಿ ತಪ್ಪದೇ ಮತದಾನ ಮಾಡಬೇಕು. ಮತದಾನ ಪ್ರತಿಯೊಬ್ಬರ ಹಕ್ಕು, ಇದನ್ನು ಚಲಾಯಿಸುವುದು ನಮ್ಮ ಕರ್ತವ್ಯ ಎಂದು ಮತದಾನ ಮಾಡಬೇಕು. ಚುನಾವಣೆಯನ್ನು ಮುಕ್ತ, ನ್ಯಾಯಸಮ್ಮತ ಹಾಗೂ ಶಾಂತಿಯುತವಾಗಿ ನಡೆಸಲು ಎಲ್ಲರೂ ಸಹಕರಿಸಬೇಕು. ಚುನಾವಣೆ ಪ್ರಜಾಪ್ರಭುತ್ವದ ಭದ್ರ ಬುನಾದಿಯಾಗಿದೆ ಎಂದರು. ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ,ಸ್ವೀಪ್ ಸಮಿತಿ ಅಧ್ಯಕ್ಷರಾದ ಸುರೇಶ್.ಬಿ.ಇಟ್ನಾಳ್ ಮಾತಾನಾಡಿ ವಿವಿಧ ಬಣ್ಣ ಬಣ್ಣಗಳ ರಂಗೋಲಿಯಲ್ಲಿ ಮತದಾನದ ಸಂದೇಶವನ್ನು ನೀಡಿದ್ದಿರಿ, ಮತದಾರರು ಯಾವುದೇ ಅಮಿಷಗಳಿಗೆ ಒಳಗಾಗದೇ ತಮ್ಮ ಅಮೂಲ್ಯವಾದ ಮತದಾನವನ್ನು ಮತಗಟ್ಟೆಗಳಿಗೆ ತೆರಳಿ ಮತದಾನ ಮಾಡಬೇಕು. ಜಿಲ್ಲೆಯಲ್ಲಿ ಕಳೆದ ಲೋಕಸಭಾ ಚುನಾವಣೆಯಲ್ಲಿ ಶೇ.72.96 ರಷ್ಟು ಮತದಾನವಾಗಿರುತ್ತದೆ. ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಶೇ.85 ರಷ್ಟುಗರಿಷ್ಠ ಪ್ರಮಾಣದ ಮತದಾನ ಆಗುವಂತೆ ಗುರಿ ಹೊಂದಲಾಗಿದೆ ಎಂದು ತಿಳಿಸಿದರು.ಆಪ್ ಡೌನ್‌ಲೋಡ್ ಮಾಡಿದರೆ, ನೀವು ಮತ ಹಾಕುವ ವ್ಯಕ್ತಿಯ ವಿವರವನ್ನು ತಿಳಿಸುತ್ತದೆ. ಈ ಬಾರಿ ಮತದಾರರ ಚೀಟಿಯಲ್ಲಿ ಕ್ಯೂ ಆರ್ ಕೋಡ್‌ನ್ನು ಸಹ ನೀಡಲಾಗುತ್ತದೆ. ಅದರಲ್ಲಿ ನಿಮ್ಮದು ಯಾವ ಮತಗಟ್ಟೆ, ಮತಗಟ್ಟೆಗೆ ಹೋಗುವ ದಾರಿ ಇನ್ನೂ ಹೆಚ್ಚಿನ ವಿವರವನ್ನು ತಿಳಿಯಬಹುದು. ಮತದಾನ ದಿನ ಸಾರ್ವತ್ರಿಕ ರಜೆ ದಿನವಾಗಿರುತ್ತದೆ. ಆದ್ದರಿಂದ ಎಲ್ಲರೂ ತಪ್ಪದೇ ಬಂದು ಮತದಾನ ಮಾಡಬೇಕು ಎಂದರು.ಪೊಲೀಸ್ ವರಿಷ್ಠಾಧಿಕಾರಿ ಉಮಾಪ್ರಶಾಂತ್, ಜಿ.ಪಂ ಯೋಜನಾಧಿಕಾರಿ ಮಲ್ಲನಾಯ್ಕ, ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರಾದ ನಾಗರಾಜ, ಬಿಸಿಎಂ ಅಧಿಕಾರಿ ಗಾಯತ್ರಿ, ಪರಿಶಿಷ್ಟ ವರ್ಗಗಳ ಅಧಿಕಾರಿ ಬೇಬಿ ಸುನೀತಾ, ಜಿ.ಪಂ. ಯೋಜನಾ ಅಂದಾಜು ಮತ್ತು ಮೌಲ್ಯಮಾಪನ ಅಧಿಕಾರಿ ಶಾರದೆ ದೊಡ್ಡಗೌಡ್ರು ಹಾಗೂ ಇನ್ನಿತರರು ಉಪಸ್ಥಿತರಿದ್ದರು.




# ಬೆಳೆವಿಮೆ ಪಾವತಿಯಲ್ಲಿ ರೈತರಿಗೆ ಅನ್ಯಾಯ: ರೈತ ಸಂಘ ಆರೋಪ



» ಚಳ್ಳಕೆರೆ

ಸರ್ಕಾರ ಇತ್ತೀಚಿಗೆ ತಾಲ್ಲೂಕಿನಾದ್ಯಂತ ಬೆಳೆವಿಮೆ ಹಣವನ್ನು ಬಿಡುಗಡೆ ಮಾಡಿದ್ದು, ಪರಶುರಾಮಪುರ ಹೋಬಳಿಯ ಸಿದ್ದೇಶ್ವರದುರ್ಗ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ನಿಗದಿತ ಪ್ರಮಾಣದಲ್ಲಿ ಬೆಳೆವಿಮೆ ರೈತರಿಗೆ ದೊರಕಿಲ್ಲ. ಕೂಡಲೇ ಈ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳು ಗಮನಹರಿಸಿ ಈ ಭಾಗದ ರೈತರಿಗೆ ನ್ಯಾಯಯುತವಾಗಿ ಬೆಳೆವಿಮೆ ಹಣ ವಿತರಣೆ ಮಾಡಬೇಕೆಂದು ಅಖಂಡ ಕರ್ನಾಟಕ ರೈತ ಸಂಘ ತಾಲ್ಲೂಕು ಅಧ್ಯಕ್ಷ ಚಿಕ್ಕಣ್ಣ ಒತ್ತಾಯಿಸಿದ್ದಾರೆ. ಅವರು, ಪರಶುರಾಮಪುರ ಖಾಸಗಿ ನಿವಾಸದಲ್ಲಿ ರೈತ ಮುಖಂಡರೊಡನೆ ಸಭೆ ನಡೆಸಿ ಪತ್ರಿಕಾ ಹೇಳಿಕೆ ನೀಡಿದರು. ಪ್ರತಿ ಸಂದರ್ಭದಲ್ಲೂ ಸಿದ್ದೇಶ್ವರದುರ್ಗ ಗ್ರಾಮ ಪಂಚಾಯಿತಿಯಲ್ಲಿ ಅನ್ಯಾಯ ನಡೆಯುತ್ತಿದೆ. ಕಳೆದ 2021-22ನೇರಲ್ಲೂ ಸಹ ಸುಮಾರು 80ಲಕ್ಷಕ್ಕೂ ಹೆಚ್ಚು ಹಣ ರೈತರಿಗೆ ಅನ್ಯಾಯವಾಗಿತ್ತು. ಈ ಬಗ್ಗೆ ತನಿಖೆ ನಡೆಯುತ್ತಿದ್ದರೂ ಸಂಬಂಧಪಟ್ಟವರ ಮೇಲೆ ಕಾನೂನು ಕ್ರಮ ಜರುಗಿಸಬೇಕಿದ್ದು, ಇನ್ನೂ ಕ್ರಮವಾಗಿಲ್ಲ. ಸರ್ಕಾರ ಕೂಡಲೇ ಈ ಭಾಗದ ರೈತರಿಗೆ ಬೆಳೆವಿಮೆ ಹಣ ಸಮರ್ಪಕವಾಗಿ ವಿತರಣೆ ಮಾಡುವತ್ತ ಮುಂದಾಗಬೇಕು ಎಂದು ಒತ್ತಾಯಿಸಿದ್ದಾರೆ. ತಾಲ್ಲೂಕು ಪ್ರಧಾನ ಕಾರ್ಯದರ್ಶಿ ಪ್ರಕಾಶ್, ಖಾದರ್‌ಭಾಷ, ಅಣ್ಣಪ್ಪ, ಶಾಂತಣ್ಣ, ಹನುಮಂತರಾಯ, ಪರಮೇಶ್ವರಪ್ಪ ಉಪಸ್ಥಿತರಿದ್ದರು.

## ಪ್ರಮುಖ ಸುದ್ದಿ

ವಿಕಲಚೇತನ ಬೈಕ್ ರ್‍ಯಾಲಿ ಚಾಲನೆಯಲ್ಲಿ ಚುನಾವಣಾಧಿಕಾರಿ ಆನಂದ ಮನವಿ

# ಲೋಕಸಭಾ ಚುನಾವಣೆಗೆ ಪ್ರತಿಯೊಬ್ಬ ಮತ ಮತಚಲಾಯಿಸಿ

» ಚಳ್ಳಕೆರೆ

ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಈ ತಿಂಗಳ 26ರಂದು ನಡೆಯುವ ಮತದಾನದ ಪ್ರಮಾಣವನ್ನು ಕಡ್ಡಾಯವಾಗಿ ಹೆಚ್ಚಿಸಬೇಕಿದೆ. ಸಂವಿಧಾನಬದ್ಧ ಮತದಾನದ ಹಕ್ಕನ್ನು ಪ್ರತಿಯೊಬ್ಬ ಮತದಾರರನ್ನು ಚಲಾಯಿಸುವ ಮೂಲಕ ಯೋಗ್ಯ ವ್ಯಕ್ತಿ ಆಯ್ಕೆಗೆ ಸಹಕಾರ ನೀಡಬೇಕಿದೆ. ಮತದಾರರಲ್ಲಿ ಜಾಗೃತಿ ಮೂಡಿಸಲು ವಿಕಲಚೇತನ ಬೈಕ್ ರ್‍ಯಾಲಿ ಹಮ್ಮಿಕೊಂಡಿದ್ದು ಎಲ್ಲಾ ಮತದಾರರು ತಪ್ಪದೆ ಮತದಾನ ಮಾಡಬೇಕೆಂದು ಸಹಾಯಕ ಚುನಾವಣಾಧಿಕಾರಿ ಬಿ.ಆನಂದ ತಿಳಿಸಿದರು.

ಅವರು, ಶುಕ್ರವಾರ ನಗರದ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ತಾಲ್ಲೂಕು ವಿಕಲಚೇತನರು ಹಮ್ಮಿಕೊಂಡಿದ್ದ ಮೋಟಾರ್‌ಬೈಕ್ ರ್‍ಯಾಲಿಗೆ ಚಾಲನೆ ನೀಡಿ ಮಾತನಾಡಿದರು. ಜಿಲ್ಲಾ ಸ್ವೀಫ್ ಸಮಿತಿ ಮತ್ತು ತಾಲ್ಲೂಕು ಸ್ವೀಫ್ ಸಮಿತಿ ಸಂಯುಕ್ತಾಶ್ರಯದಲ್ಲಿ ಮತದಾನಕ್ಕೆ ಸಂಬಂಧಿಸಿದ ಹಲವಾರು ಕಾರ್ಯಕ್ರಮ ರೂಪಿಸಿದ್ದು, ಇದರಲ್ಲಿ ಎಲ್ಲರೂ ಪಾಲ್ಗೊಳ್ಳಬೇಕಿದೆ. ಕ್ಷೇತ್ರದ ಎಲ್ಲಾ ಮತಗಟ್ಟೆಗಳಲ್ಲೂ ಮತದಾನ ಚುರುಕಿನಿಂದ ನಡೆಯುವಂತೆ ಸಹಕರಿಸಬೇಕಿದೆ. ಪ್ರತಿ ಚುನಾವಣೆಯಲ್ಲೂ ಮತದಾರ ತಪ್ಪದೆ ಮತದಾನ ಮಾಡಬೇಕು. ಯಾವುದೇ ಕಾರಣಕ್ಕೂ ಮತದಾನದಿಂದ ವಂಚಿತನಾಗಬಾರದು ಎಂದರು.

ತಾಲ್ಲೂಕು ಸ್ವೀಫ್ ಸಮಿತಿ ಅಧ್ಯಕ್ಷ ಬಿ.ಎಸ್.ಲಕ್ಷ್ಮಣ್ ಮಾತನಾಡಿ, ತಾಲ್ಲೂಕು ಸ್ವೀಫ್ ಸಮಿತಿ ಹಾಗೂ ವಿವಿಧ ಸಂಘ ಸಂಸ್ಥೆಗಳ ಸಹಕಾರದಿಂದ ವಿವಿಧ ಮತದಾನ ಜಾಗೃತಿ ಕಾರ್ಯಕ್ರಮ ನಡೆಯುತ್ತಿವೆ. ಮತದಾನದಲ್ಲಿ ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕು ಎಂಬ ಉದ್ದೇಶದಿಂದ ರಂಗೋಲಿ ಮೂಲಕ ಮಹಿಳಾ ಮತದಾರರನ್ನು ಜಾಗೃತಿಗೊಳಿಸಲಾಗುತ್ತಿದೆ. ಮತದಾನ ಮಾಡುವ ಮೂಲಕ ನಾವೆಲ್ಲರೂ ಸಂವಿಧಾನ ಹಕ್ಕನ್ನು ಗೌರವಿಸಬೇಕು ಎಂದರು.

ತಹಶೀಲ್ದಾರ್ ರೇಹಾನ್‌ಪಾಷ, ಸ್ವೀಫ್ ಸಮಿತಿ ಕಾರ್ಯದರ್ಶಿ ಜೀವನ್‌ಕಟ್ಟೆಮನಿ, ಬಿಇಒ ಕೆ.ಎಸ್.ಸುರೇಶ್, ಅಂಗವಿಕಲ ಕಲ್ಯಾಣಾಧಿಕಾರಿ ನರಸಿಂಹಮೂರ್ತಿ, ಶ್ರೀಧರ, ಶಿರಸ್ತೇದಾರ್ ಹಸೀನಬೇಗಂ, ಓಬಳೇಶ್ ಮುಂತಾದವರು ಉಪಸ್ಥಿತರಿದ್ದರು.



# ಬರ ನಿರ್ವಹಣೆಯಲ್ಲಿ ರಾಜ್ಯ, ಕೇಂದ್ರ ವಿಫಲ

» ಚಿತ್ರದುರ್ಗ

ಬರ ನಿರ್ವಹಣೆಯಲ್ಲಿ ವಿಫಲವಾಗಿರುವ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳಿಗೆ ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ತಕ್ಕ ಪಾಠ ಕಲಿಸಲಾಗುವುದೆಂದು ಕರ್ನಾಟಕ ಸರ್ವೋದಯ ಪಕ್ಷದ ರಾಜ್ಯಾಧ್ಯಕ್ಷ ಚಾಮರಸ ಮಾಲಿ ಪಾಟೀಲ್ ಎಚ್ಚರಿಸಿದರು.

ಪತ್ರಕರ್ತರ ಭವನದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಕರ್ನಾಟಕ ಸರ್ವೋದಯ ಪಕ್ಷದಿಂದ ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಬಾಗಲಕೋಟೆಯಿಂದಸ್ಪರ್ಧಿಸಿದ್ದೇನೆ.ಕಳೆದ ವಿಧಾನಸಭೆ ಚುನಾವಣೆಯಲ್ಲಿ ರಾಜ್ಯದ ಎಂಟು ಕ್ಷೇತ್ರಗಳಲ್ಲಿ ಸ್ಪರ್ಧಿಸಲಾಗಿತ್ತು. ಒಂದು ಕ್ಷೇತ್ರದಲ್ಲಿ ಮಾತ್ರ ಗೆದ್ದಿದ್ದೇವೆ.

ಎನ್.ಡಿ.ಎ. ಮತ್ತು ಮಿತ್ರ ಪಕ್ಷಗಳ ವಿರುದ್ದವಾಗಿ ಮತ ಚಲಾಯಿಸುವಂತೆ ಎಲ್ಲಾ ಕಡೆ ಸುತ್ತಾಡಿ ಜನರನ್ನು ಜಾಗೃತಿಗೊಳಿಸಲಾಗುವುದು. 2014 ರ



ಪಾರ್ಲಿಮೆಂಟ್ ಚುನಾವಣಾ ಪೂರ್ವದಲ್ಲಿ ನರೇಂದ್ರಮೋದಿ ರೈತರ ಸಾಲ ಮನ್ನ ಮಾಡುವುದಾಗಿಹೇಳಿಅಧಿಕಾರಕ್ಕೆಬಂದರು. ಎರಡನೆ ಬಾರಿಗೂ ಪ್ರಧಾನಿಯಾಗಿ ಹತ್ತು ವರ್ಷಗಳಲ್ಲಿ ಕಾರ್ಪೋರೇಟ್ ಕಂಪನಿಗಳ ಹದಿನಾಲ್ಕು ಲಕ್ಷ ರೂ.ಗಳ ಸಾಲ ಮನ್ನ ಮಾಡಿದರೆ ವಿನಃ ರೈತರ ಕಡೆ ತಿರುಗಿಯೂ ನೋಡಲಿಲ್ಲ. ನೈಸರ್ಗಿಕ ವಿಕೋಪದಿಂದ ಆಗಿರುವ ನಷ್ಟವನ್ನು ಭರಿಸಲು ಆಗದೆ ಸಂಕಷ್ಟದಲ್ಲಿರುವ ರೈತನ ಪಾಡು ಹೇಳತೀರದಂತಾಗಿದೆ ಎಂದರು.

ಸ್ವಾಮಿನಾಥನ್ ವರದಿ ಜಾರಿಗೆ ತರುತ್ತೇವೆಂದು ಹೇಳಿ ಇದುವರೆಗೂ ಜಾರಿಗೊಳಿಸಿಲ್ಲ. ರೈತರಿಗೆ ಅತಿವೃಷ್ಟಿ ಪರಿಹಾರ ಕೊಟ್ಟಿಲ್ಲ. ಐದು ನೂರು ಒಂದು ಸಾವಿರ ರೂ. ಮುಖ ಬೆಲೆಯ ನೋಟುಗಳನ್ನು ಅಮಾನ್ಯೀಕರಣಗೊಳಿಸಿ ಸಿರಿವಂತರು ತಮ್ಮ ಬಳಿಯಿರುವ ಕಪ್ಪು ಹಣವನ್ನು ಬಿಳಿ ಮಾಡಿಸಿಕೊಳ್ಳಲು ಅನುಕೂಲ ಮಾಡಿದರಷ್ಟೆ. ರೈತರ ಆದಾಯ ದ್ವಿಗುಣವಾಗಲಿಲ್ಲ. ರೈತರು ಸಾವಿರಾರು ಕೋಟಿ ರೂ.ಗಳ ಬೆಳೆವಿಮೆ ಕಟ್ಟಿದ್ದಾರೆ. ಅಪ್ಪಿತಪ್ಪಿಯೂ ಬೆಳೆ ನಷ್ಟದ ಪರಿಹಾರ ರೈತರ ಕೈಸೇರಿಲ್ಲ. ಭದ್ರಾಮೇಲ್ದಂಡೆ ಯೋಜನೆಗೆ ಐದು ಸಾವಿರದ ಮುನ್ನೂರು ಕೋಟಿ ರೂ.ಗಳನ್ನು ಘೋಷಿಸಿರುವ ಕೇಂದ್ರ ಸರ್ಕಾರ ನಯಾ ಪೈಸೆಯನ್ನು ಬಿಡುಗಡೆಗೊಳಿಸಿಲ್ಲ. ರಾಮ ಮಂದಿರದ ಹೆಸರಿನಲ್ಲಿ ಫಂಡ್ ಎತ್ತಿದೆ. ಕೃಷಿ, ಕೃಷಿ ಮಾರುಕಟ್ಟೆಯನ್ನು ಕಾರ್ಪೋರೇಟ್‌ಗಳಿಗೆ ನೀಡುವುದರಲ್ಲಿ ಅನುಮಾನವಿಲ್ಲ. ಈ ಬಾರಿಯ ಲೋಕಸಭೆ ಚುನಾವಣೆಯಲ್ಲಿ ಕೋಮುವಾದಿ ಬಿಜೆಪಿ. ಅಧಿಕಾರಕ್ಕೆ ಬಂದರೆ ಸಂವಿಧಾನ ಉಳಿಯುವುದಿಲ್ಲ. ಅದಕ್ಕಾಗಿ ಎಚ್ಚರಿಕೆಯಿಂದ ಮತ ಚಲಾಯಿಸಿ ಎಂದು ರಾಜ್ಯದ ಮತದಾರರನ್ನು ಎಚ್ಚರಿಸಲಾಗುವುದು ಎಂದು ಹೇಳಿದರು.

ಕರ್ನಾಟಕ ಸರ್ವೋದಯ ಪಕ್ಷದ ಜಿಲ್ಲಾಧ್ಯಕ್ಷ ಜೆ.ಯಾದವರೆಡ್ಡಿ, ಕರ್ನಾಟಕ ರಾಜ್ಯ ರೈತ ಸಂಘದ ಜಿಲ್ಲಾಧ್ಯಕ್ಷ ಬಸ್ತಿಹಳ್ಳಿ ಜಿ.ಸುರೇಶ್‌ಬಾಬು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಗ್ರಾಹಕರಿಂದ ಪೇಪರ್ ಬ್ಯಾಗ್‌ಗೆ ರೂ.10 ಪಡೆದುಕೊಂಡು ನಗರದ ಶಾಪಿಂಗ್ ಮಾಲ್‌ಗೆ ರೂ.7000 ದಂಡ

» ದಾವಣಗೆರೆ

ವಕೀಲ ವೃತ್ತಿಯಲ್ಲಿ ತೊಡಗಿಕೊಂಡಿರುವ ಆರ್. ಬಸವರಾಜ್ ಎಂಬುವವರು ದಾವಣಗೆರೆ ನಗರದ ಮ್ಯಾಕ್ಸ್ ರೀಟೈಲ್ ಅಂಗಡಿಯಲ್ಲಿ 2023 ರ ಅಕ್ಟೋಬರ್ 29 ರಂದು ರೂ.1,499 ಪಾವತಿಸಿ, ಡೆನಿವಾ ಪ್ಯಾಂಟ್ ಖರೀದಿಸಿದರು. ಈ ವೇಳೆಯಲ್ಲಿ ಇಲ್ಲಿಯೇ ಲೈಫ್ ಸ್ಟೈಲ್ ಇಂಟರ್‌ನ್ಯಾಷನಲ್ ವಾಣಿಜ್ಯ ಸಂಸ್ಥೆ ಪ್ಯಾಂಟ್ ಮಾರಾಟದ ವೇಳೆ ಹೆಚ್ಚುವರಿಯಾಗಿ ರೂ.10/- ಪೇಪರ್ ಬ್ಯಾಗ್‌ಗೆ ಪಡೆಯಲಾಯಿತು. ಗ್ರಾಹಕರಾದ ಆರ್. ಬಸವರಾಜ್ ಇವರ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದಲ್ಲಿ ದೂರನ್ನು ದಾಖಲಿಸಿ ವಾಣಿಜ್ಯ ಸಂಸ್ಥೆ ವಿರುದ್ದ ರೂ.50,000 ಮಾನಸಿಕ ಕಿರುಕುಳ ಹಾಗೂ ದೂರು ದಾಖಲಿಸಲು ಖರ್ಚು ಮಾಡಿದ ಮೊ ರೂ.10,000 ಗಳನ್ನು ಪಾವತಿಸುವಂತೆ ದೂರನ್ನು ದಾಖಲಿಸಿದರು. ವಾಣಿಜ್ಯ ಸಂಸ್ಥೆಗೆ ನೋಟಿಸ್ ಜಾರಿ ಮಾಡಿದ್ದು ಈ ಸಂಸ್ಥೆ ವಕೀಲರ ಮುಖಾಂತರ ಹಾಜರಾಗಿ ಬ್ಯಾಗ್‌ಗೆ ಹೆಚ್ಚುವರಿಯಾಗಿ ಪಡೆದ ಹಣಕ್ಕೆ ಸಮರ್ಥಿಸಿಕೊಂಡಿತ್ತು. ಆದರೆ ಗ್ರಾಹಕರ ಆಯೋಗ ಈ ಮೊದಲು ರಾಷ್ಟ್ರೀಯ ಗ್ರಾಹಕರ ಆಯೋಗ ಬಿಗ್ ಬಜಾರ್ ವಿರುದ್ದ ಸಾಯಲ್ ದಾವ ಪ್ರಕರಣದ ನ್ಯಾಯ ನಿರ್ಣಯದ ತೀರ್ಪಿನ ಅನುಗುಣವಾಗಿ ವಾಣಿಜ್ಯ ಸಂಸ್ಥೆಗಳು ಕ್ಯಾರಿ ಬ್ಯಾಗ್‌ಗಳಿಗೆ ಹೆಚ್ಚಿನ ಹಣವನ್ನು ಪಡೆಯುವಂತಿಲ್ಲ ಎಂಬ ತೀರ್ಪನ್ನು ಉಲ್ಲೇಖಿಸಿ ಹೆಚ್ಚುವರಿಯಾಗಿ ರೂ.10 ಪಡೆದ ಸಂಸ್ಥೆಯ ಕ್ರಮವು ಗ್ರಾಹಕರ ಸಂರಕ್ಷಣಾ ಕಾಯ್ದೆಯ ಅಡಿಯಲ್ಲಿ ಅನುಚಿತ ವ್ಯಾಪಾರ ಪದ್ದತಿಯೆಂದು ಪರಿಗಣಿಸಿ ದಾವಣಗೆರೆ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷರಾದ ಮಹಂತೇಶ ಈರಪ್ಪ ಶಿಗ್ಲಿ, ಸದಸ್ಯರಾದ ತ್ಯಾಗರಾಜನ್ ಮತ್ತು ಮಹಿಳಾ ಸದಸ್ಯರಾದ ಶ್ರೀಮತಿ ಬಿ.ಯು. ಗೀತಾ ಇವರು ವಾಣಿಜ್ಯ ಸಂಸ್ಥೆಗೆ ರೂ.7000 ದಂಡವಿದಿಸಿ ಆದೇಶಿಸಿದೆ.

### ವಿದ್ಯುತ್ ವ್ಯತ್ಯಯ

» ದಾವಣಗೆರೆ

ಯರಗುಂಟೆ ಉಪಕೇಂದ್ರದಿಂದ ಹೊರಡುವ 11ಕೆವಿ ಎಫ್-18 ನೀಲಾನಹಳ್ಳಿ ಎನ್.ಜೆ.ವೈ ಮಾರ್ಗದಲ್ಲಿ ಎ.ಬಿ ಕೇಬಲ್ ಕಾಮಗಾರಿ ಇರುವುದರಿಂದ ಏಪ್ರಿಲ್ 6 ರಂದು ಬೆಳಿಗ್ಗೆ 10 ರಿಂದ ಸಂಜೆ 5 ಗಂಟೆಯವರೆಗೆ ದೊಡ್ಡಬಾತಿ, ಹಳೇಬಾತಿ,ನೀಲಾನಹಳ್ಳಿ ವಿದ್ಯುತ್ ವ್ಯತ್ಯಯವಾಗಲಿದೆ.

## ಯುವ ಮತದಾರರಿಗೆ ಜಾಗೃತಿ



» ಚಿತ್ರದುರ್ಗ

ಚಿತ್ರದುರ್ಗ ನಗರದ ಮೆಟ್ರಿಕ್ ಪೂರ್ವ ಪರಿಶಿಷ್ಟಜಾತಿಯ ಬಾಲಕಿಯರ ವಸತಿ ನಿಲಯದಲ್ಲಿ ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಗುರುವಾರ ಯುವ ಮತದಾರರಿಗೆ ಜಾಗೃತಿ ಕಾರ್ಯಕ್ರಮ ನಡೆಯಿತು.

ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರಾದ ಎಸ್.ಜೆ.ಸೋಮಶೇಖರ್ ಮಾತನಾಡಿ, ಪ್ರಜಾಪ್ರಭುತ್ವದಲ್ಲಿ ಮತದಾನ ನಿಮ್ಮೆಲ್ಲರ ಹಕ್ಕು. ಅದನ್ನು ತಪ್ಪದೆ ಚಲಾಯಿಸುವ ಮೂಲಕ ಪ್ರೌಢ ನಾಗರಿಕರಾಗಿ ಎಂದು ಕರೆ ನೀಡಿದರು. ಇದೇ ಸಂದರ್ಭದಲ್ಲಿ ವಿದ್ಯಾರ್ಥಿನಿಯರಿಗೆ ಮತದಾರರ ಪ್ರತಿಜ್ಞಾ ವಿಧಿ ಬೋಧಿಸಲಾಯಿತು.

ಕಾರ್ಯಕ್ರಮದಲ್ಲಿ ಜಿ.ಪಂ ಉಪ ಕಾರ್ಯದರ್ಶಿ ತಿಮ್ಮಪ್ಪ, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಓ.ಪರಮೇಶ್ವರಪ್ಪ, ಸಹಾಯಕ ನಿರ್ದೇಶಕ ಕೃಷ್ಣಮೂರ್ತಿ, ಸ್ವೀಪ್ ಸಮಿತಿ ಜಿಲ್ಲಾ ಸಂಯೋಜಕಿ ಸುಷ್ಮಾರಾಣಿ ಹಾಗೂ ವಸತಿ ನಿಲಯಗಳ ನಿಲಯ ಪಾಲಕರು ಇದ್ದರು.

## ದೇಶ ಉಳಿಸಿ ಸಂಕಲ್ಪ ಯಾತ್ರೆ 3 ತಂಡಗಳಲ್ಲಿ ಸಂಚಾರ

» ಚಿತ್ರದುರ್ಗ

ಜಾತಿ, ಧರ್ಮ, ದೇವರ ಹೆಸರಿನಲ್ಲಿ ರಾಜಕಾರಣ ಮಾಡುತ್ತಿರುವ ಕೋಮುವಾದಿ ಬಿಜೆಪಿ. ಪಾರ್ಲಿಮೆಂಟ್ ಚುನಾವಣೆಯಲ್ಲಿ ಅಧಿಕಾರಕ್ಕೆ ಬಂದರೆ ಸಂವಿಧಾನ ಉಳಿಯುವುದಿಲ್ಲ ಎನ್ನುವುದನ್ನು ರಾಜ್ಯದ ಜನರಿಗೆ ಮನವರಿಕೆ ಮಾಡಿಕೊಡುವುದಕ್ಕಾಗಿ ದೇಶ ಉಳಿಸಿ ಸಂಕಲ್ಪ ಯಾತ್ರೆ ಕೈಗೊಳ್ಳಲಾಗಿದೆ ಎಂದು ರೈತ ಮುಖಂಡ ತುಮಕೂರಿನ ಎನ್.ಜಿ.ರಾಮಚಂದ್ರಪ್ಪ ಹೇಳಿದರು.ಪತ್ರಕರ್ತರ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಏಪ್ರಿಲ್ ಒಂದರಿಂದ ಆರಂಭಗೊಂಡಿರುವ ದೇಶ ಉಳಿಸಿ ಸಂಕಲ್ಪ ಯಾತ್ರೆ ಮೂರು ತಂಡಗಳಲ್ಲಿ ಸಂಚರಿಸುತ್ತಿದ್ದು, 8 ರಂದು ಬೆಳಗಾವಿ ತಲುಪಿ ಬೃಹತ್ ಸಮಾವೇಶ




ನಡೆಸಲಿದೆ. ಈಗಾಗಲೆ ಎರಡು ಬಾರಿ ದೇಶದ ಪ್ರಧಾನಿಯಾಗಿರುವ ನರೇಂದ್ರಮೋದಿ 3ನೆ ಬಾರಿಗೂ ಅಧಿಕಾರದ ಚುಕ್ಕಾಣಿ ಹಿಡಿಯಲು ಹೊರಟಿರುವುದನ್ನು ತಡೆಯಬೇಕು.

ದೇವರು, ಧರ್ಮದ ಹೆಸರಿನಲ್ಲಿ ಕೋಟಿಗಟ್ಟಲೆ ಹಣ ಲೂಟಿ ಹೊಡೆಯುವರು ದೇಶಕ್ಕೆ ಬೇಕಿಲ್ಲ. ರೈತರು ತಮ್ಮ ನ್ಯಾಯಯುತವಾದ ಬೇಡಿಕೆಗಳನ್ನು ಈಡೇರಿಸಿಕೊಳ್ಳುವುದಕ್ಕಾಗಿ ದೆಹಲಿಯಲ್ಲಿ ಚಳುವಳಿ ನಡೆಸಿದರೆ ಟಿಯರ್ ಗ್ಯಾಸ್, ರಬ್ಬರ್ ಗುಂಡು, ನೆಲಕ್ಕೆ ಮೊಳೆ ಹೊಡೆದು ತಂತಿ ಬೇಲಿ ಹಾಕಿ ದೇಶಕ್ಕೆ ಅನ್ನ ನೀಡುವ ರೈತರನ್ನು ಅವಮಾನಿಸಿರುವುದನ್ನು ಮರೆಯಲಾಗುವುದಿಲ್ಲ. ಕಾರ್ಪೋರೇಟ್ ಕಂಪನಿಗಳ ಪರವಾಗಿರುವವರನ್ನುಈಬಾರಿಯಲೋಕಸಭೆ ಚುನಾವಣೆಯಲ್ಲಿ ಸೋಲಿಸಬೇಕೆಂಬುದು ದೇಶ ಉಳಿಸಿ ಸಂಕಲ್ಪ ಯಾತ್ರೆ ಉದ್ದೇಶ ಎಂದರು.




### ತಿಮ್ಮಪ್ಪಗೆ ಮನೆಯಿದ್ದರೂ ಸಹಾ ಒಂದು ಕಡೆ ನೆಲೆ ಇಲ್ಲಾ...

## ಇಲ್ಲಿ ದೇವರು ವರ ಕೊಟ್ಟರೂ ಪೂಜಾರಿ...


ತಿಮ್ಮಪ್ಪ ಸ್ವಾಮಿ


ತಿಮ್ಮಪ್ಪ ಸ್ವಾಮಿಯ ಮೂಲ ಗುಡಿ


ನೂತನ ದೇವಸ್ಥಾನ ನಿರ್ಮಾಣ

» ನಾಗತಿಹಳ್ಳಿಮಂಜುನಾಥ್

ವಿಶೇಷ ವರದಿ

ಹೊಸದುರ್ಗ:ನಮ್ಮಲ್ಲಿ, ಒಂದು ಗಾದೆಯ ಮಾತಿದೆ ಅದೇನಪ್ಪ ಅಂದ್ರೆ ಇಲ್ಲಿ ದೇವರು ವರ ಕೊಟ್ಟರೂ ಪೂಜಾರಿ......... ಕೊಡುತ್ತಿಲ್ಲಾ...? ಈ ಒಂದು ಗಾದೆಗೆ ಅನ್ವಯವಾಗುವಂತೆ ಇಲ್ಲೊಂದು ಪ್ರಕರಣ ಬುಗುಲೆದ್ದಿದೆ ಹೊಸದುರ್ಗ ತಾಲೂಕು ಮಸಣಿಹಳ್ಳಿ ಗೊಲ್ಲರಹಟ್ಟಿ ಗ್ರಾಮದಲ್ಲಿ ದೇವಸ್ಥಾನದ ವಿಷಯದಲ್ಲಿ ಸಮಾರು ವರ್ಷಗಳಿಂದಲೂ ಸಹಾ ವಾದ-ವಿವಾದವೊಂದರಲ್ಲಿ ನ್ಯಾಯಾಲಯದ ಅನುಮತಿ ಸಿಕ್ಕರೂ ಸಹಾ ಎರಡು ಬಣಗಳ ನಡುವೆ ಸಮಸ್ಯೆಯೊಂದು ಬಗೆ ಹರಿಯದೆ ತಲೆ ಎತ್ತಿ ನಿಂತಿದೆ.

ಎರಡೂ ಬಣಗಳ ಮದ್ಯೆ ಈ ವಿವಾದವು ಹಲವು ವರ್ಷಗಳ ಹಿಂದೆಯೇ ನ್ಯಾಯಾಲಯದ ಮೆಟ್ಟಿಲೇರಿ ತೀರ್ಪು ಹೊರಬಂದಿದ್ದರೂ ಸಹಾ ಈ ಪ್ರಕರಣ ಸುಖಾಂತ್ಯವಾಗದೆ ಇಂದಿಗೂ ಸಹಾ ಈಗೆಯೇ ಮುಂದುವರೆದಿದೆ, ಮೇಗಳಹಟ್ಟಿ ಗ್ರಾಮದಲ್ಲಿ ನೆಲೆ ಗೊಂಡಿದ್ದ ತಿಮ್ಮಪ್ಪ ಸ್ವಾಮಿ ದೇವರ ಮೂರ್ತಿಯನ್ನು 2013 ರಲ್ಲಿ ನೂತನ ದೇವಾಲಯ ನಿರ್ಮಾಣ ಕಾರ್ಯದ ಅಂಗವಾಗಿ ಅದೇ ಊರಿನ ಒಂದು ಸಮುದಾಯ ಭವನಕ್ಕೆ ಸ್ಥಳಿಯ ಮುಖ್ಯಸ್ಥರ ಸಮ್ಮುಖದಲ್ಲಿ ಸ್ಥಳಾಂತರಿಸಲಾಗಿತ್ತು.

ಇದೀಗ ನೂತನ ದೇವಾಲಯ ನಿರ್ಮಾಣಗೊಂಡಿದ್ದು ಇದೇ ಜಾಗದಲ್ಲಿ ಮರು ಸ್ಥಾಪಿಸಲು ಸಿದ್ದತೆಗಳು ನಡೆದಿದ್ದರೂ ಸಹಾ ದೇವಸ್ಥಾನದ ಆಡಳಿತದ ಹಿಡಿತಕ್ಕೆ ಸಂಬಂಧಿಸಿದಂತೆ ಈ ದೇವಸ್ಥಾನದ ಗೌಡರು ಮತ್ತು ಆಡಳಿತ ಮಂಡಳಿಯವರ ನಡುವೆ ಭಿನ್ನಾಭಿಪ್ರಾಯ ಉಂಟಾಗಿ ಇದೀಗ ಸುಮಾರು ವರ್ಷಗಳಿಂದಲೂ ಸಹಾ ತಿಮ್ಮಪ್ಪ ಸ್ವಾಮಿಯ ದೇವರ ಮೂರ್ತಿಯು ಸಮುದಾಯ ಭವನದಲ್ಲೆ ಇರುವಂತಾಗಿದೆ.

ಹೊಸದುರ್ಗದ ಘನ ನ್ಯಾಯಾಲಯದಲ್ಲಿ ಹಲವು ವರ್ಷಗಳಿಂದಲೂ ಸಹಾ ಈ ಪ್ರಕರಣ ಮುಂದುವರೆದಿತ್ತು ಆದರೆ 2023 ರ ಡಿಸೆಂಬರ್ 15 ರಂದು ಕೋರ್ಟ್ ಆದೇಶ ಹೊರಬಿದ್ದಿದೆ ಈಗಿದ್ದರೂ ನ್ಯಾಯಾಲಯದ ತೀರ್ಪಿಗೆ ಮಾನ್ಯತೆ ಇಲ್ಲದಂತಾಗಿದೆ.

ಏನಿದು ಪ್ರಕರಣ:ನ್ಯಾಯಾಲಯದ ಆದೇಶದಂತೆ ತಾಲೂಕಿನ ಮಾಡದಕೆರೆ ಹೋಬಳಿ ಮಸಣಿಹಳ್ಳಿಗೊಲ್ಲರಹಟ್ಟಿ ಶ್ರೀ ಹಟ್ಟಿತಿಮ್ಮಪ್ಪ ದೇವರ ಪೂಜೆಗೆ ಅವಕಾಶ ಕಲ್ಪಿಸಿ ಕೊಡಬೇಕು,ಎಂದು ಗ್ರಾಮಸ್ಥರು ಮನವಿ ಮಾಡಿದ್ದಾರೆ. ತಿಮ್ಮಪ್ಪ ಸ್ವಾಮಿಯ ಹಿನ್ನೆಲೆಯ ತಿಳಿಯಬೇಕೆಂದರೆ ಮಸಣಿಹಳ್ಳಿಗೊಲ್ಲರಹಟ್ಟಿಯಲ್ಲಿ ಶ್ರೀ ಹಟ್ಟಿತಿಮ್ಮಪ್ಪ ದೇವರು ಈ ಮೊದಲು ಹುಲ್ಲಿನ ಗುಡಿಸಲಿನಲ್ಲಿತ್ತು, ಮಳೆ ಬಂದಾಗ ಈ ಗುಡಿಸಲು ಸೋರುತಿದ್ದರಿಂದ ಸಮೀಪದ ಸಮುದಾಯ ಭವನಕ್ಕೆ 2012 ರಲ್ಲಿ ದೇವರನ್ನು ಸ್ಥಳಾಂತರಿಸಲಾಯಿತು.

ಇದಾದ ನಂತರ ಗೊಲ್ಲರಹಟ್ಟಿಯಲ್ಲಿ ಎರಡು ಬಣ ಸೃಷ್ಟಿಯಾಯಿತು. ಒಂದು ಬಣದವರು ಮೂಲ ಸ್ಥಳದಲ್ಲಿ ನೂತನ ದೇವಾಲಯ ಕಟ್ಟಲು ಅವಕಾಶ ಕೊಡಬಾರದು,ದೇವರು ಈಗಿರುವ ಸಮುದಾಯ ಭವನದಲ್ಲೆ ಇರಲಿ ಎಂದು.

ಮತ್ತೊಂದು ಬಣದವರು ಮೂಲಸ್ಥಾನದಲ್ಲಿಯೇ ನೂತನ ದೇವಾಲಯ ಕಟ್ಟಲಿಕ್ಕೆ ಅವಕಾಶ ಕಲ್ಪಿಸುವಂತೆ ಹೊಸದುರ್ಗ ಜೆ.ಎಂ.ಎಫ್.ಸಿ. ನ್ಯಾಯಾಲಯಕ್ಕೆ ದಾವೆ ಸಲ್ಲಿಸಿದರು.ಈ ಪ್ರಕರಣ ಪರಿಶೀಲಿಸಿದ ಕೋರ್ಟ್ ಮೂಲಸ್ಥನದಲ್ಲಿಯೇ ನೂತನ ದೇವಸ್ಥಾನ ನಿರ್ಮಿಸುವಂತೆ ಶ್ರೀ ಹಟ್ಟಿ ತಿಮ್ಮಪ್ಪ ಮೂಲ ದೇವಸ್ಥಾನ ಟ್ರಸ್ಟ್ ಪರವಾಗಿ 2018 ರಲ್ಲಿ ಆದೇಶ ಮಾಡಿತು, ಹಟ್ಟಿ ತಿಮ್ಮಪ್ಪ ದೇವರನ್ನ ತಂದು ಹಿಂದಿನಂತೆ ಪೂಜೆ ಮುಂದುವರೆಸಿಕೊಂಡು ಹೋಗುವಂತೆ 2023 ರ ಡಿಸೆಂಬರ್ 5 ರಂದು ಕೋರ್ಟ್ ಅದೇಶ ಮಾಡಿದೆ ಇಷ್ಟೆಲ್ಲಾ ಆದರೂ ಸಹಾ ಮೂಲ ಸ್ಥಾನದಲ್ಲಿ ನೂತನ ದೇವಾಲಯ ನಿರ್ಮಾಣವಾಗಿದೆ ಇಲ್ಲಿ ಶ್ರೀ ಹಟ್ಟಿ ತಿಮ್ಮಪ್ಪ ದೇವರನ್ನ ಕೂರಿಸಲು ಅನುವು ಕೊಡುತ್ತಿಲ್ಲೆಂಬುದೇ ಮುಖ್ಯವಾದ ವಿಷಯವಾಗಿದೆ

ಈ ವಿಚಾರವಾಗಿ ಪತ್ರಿಕೆಯೊಂದಿಗೆ ಮಾತನಾಡಿದ ಮಸಣಿಹಳ್ಳಿ ಗ್ರಾಮದ ಬಸವರಾಜಪ್ಪ ಮೇಗಳಹಟ್ಟಿ ತಿಮ್ಮಪ್ಪನ ದೇವಸ್ಥಾನ ಕೋರ್ಟ್ ಆದೇಶವಾದರೂ ಸಹಾ ಬೀಗ ಕೊಟ್ಟಿಲ್ಲ, ಗೌಡನಾಗೇಂದ್ರಪ್ಪ ಮತ್ತು ಇವರ ಮಗ ಇವರುಗಳು ನಿತ್ಯವೂ ಬಾಗಿಲು ತೆಗೆದು ಪೂಜೆ ಮಾಡುತ್ತೇವೆ ಎಂದು ಹೇಳುತ್ತಾರೆ ಆದರೆ ಬಾಗಿಲು ತೆಗಿಯುತ್ತಿಲ್ಲ ಪೂಜೆಯೂ ಸಹಾ ಮಾಡುತ್ತಿಲ್ಲ,ಸಮುದಾಯ ಭವನದಲ್ಲಿರುವ ವಿಗ್ರಹವನ್ನ ಮೂಲ ದೇವಸ್ಥಾನಕ್ಕೆ ತಂದಿಟ್ಟು ಮೂಲ ದೇವಸ್ಥಾನದ ಪ್ರಜಾರಿ ಯಾರಿದ್ದರೂ ಅವರಿಗೂ ಪೂಜಾರಿಕೆ ಕೊಡಬೇಕು ಎಂದು ನಾನು ಭಕ್ತರ ಪರವಾಗಿ ಮನವಿ ಮಾಡಿಕೊಳ್ಳುತ್ತಿದ್ದೇನೆ ಎಂದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T